ಶನಿವಾರ,28.02.2026
ಬೆಂಗಳೂರು, ಬೆಲೆ: 5ರೂ.,2 ಪುಟಗಳು
ಸಂಪುಟ 01 – ಸಂಚಿಕೆ 156

Digital Varthe Kannada Daily
Volume 01 - Issue 156
Saturday 28.02.2026
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಮಹಾಸಂಸ್ಥಾನದ ಸ್ವಾಮೀಜಿಗಳ ಮೇಲೆ ಹಲ್ಲೆ: ಆರೋಪಿ ಅರೆಸ್ಟ್



**ತುಮಕೂರು:** ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲೂಕಿನ ಗೋಡೆಕೆರೆ ಗ್ರಾಮದಲ್ಲಿರುವ ಸಿದ್ಧರಾಮೇಶ್ವರ ಮಹಾಸಂಸ್ಥಾನ ಮಠದಲ್ಲಿ ನಡೆದಿರುವ ದಾಳಿ ಘಟನೆ ತಡವಾಗಿ ಬೆಳಕಿಗೆ ಬಂದು ಆತಂಕಕ್ಕೆ ಕಾರಣವಾಗಿದೆ. ಸಿದ್ಧರಾಮೇಶ್ವರ ದೇವಾಲಯದ ಗೋಪುರ ನಿರ್ಮಾಣಕ್ಕೆ ಅಡ್ಡಿಯಾಗುತ್ತಿದೆ ಎಂಬ ಆರೋಪದ ಹಿನ್ನೆಲೆ ವ್ಯಕ್ತಿಯೋರ್ವ ಮಠಾಧಿಪತಿ ಮೃತ್ಯುಂಜಯ ಸ್ವಾಮೀಜಿಗಳ ಮೇಲೆ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

ಈ ಪ್ರಕರಣಕ್ಕೆ ಸಂಬಂಧಿ ಸಿದಂತೆ ಸ್ಥಳೀಯ ನಿವಾಸಿ ಹಾಗೂ ಮಠದಲ್ಲಿ ಸ್ವಾಮೀಜಿಗಳ ಜೊತೆ ಸಂಚ–ರಿಸುತ್ತಿದ್ದ ಸಿದ್ಧರಾಮಯ್ಯ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಫೆಬ್ರವರಿ 11ರಂದು ಬೆಳಿಗ್ಗೆ ಸುಮಾರು 5.30ರ ವೇಳೆಯಲ್ಲಿ ಈ ಘಟನೆ ನಡೆದಿದ್ದು, ಇದೀಗ ಸಾರ್ವಜನಿಕ–ರಿಗೆ ಮಾಹಿತಿ ಲಭ್ಯವಾಗಿದೆ.

ಮಾಹಿತಿಯ ಪ್ರಕಾರ, ಮುಂಜಾನೆ ಸಮಯದಲ್ಲಿ ಮಠಕ್ಕೆ ಬಂದ ಸಿದ್ಧರಾಮಯ್ಯ ಸ್ವಾಮೀ–ಜಿಗಳೊಂದಿಗೆ ವಾಗ್ವಾದಕ್ಕೆ ಇಳಿದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. "ಸಿದ್ಧರಾಮೇಶ್ವರ ದೇವಾಲಯದ ಗೋಪುರ ನಿರ್ಮಾಣಕ್ಕೆ ನೀನು ಅಡ್ಡಿಯಾಗುತ್ತಿದ್ದೀಯ, ಅದಕ್ಕಾಗಿ ನಿನ್ನನ್ನು ಕೊಲೆ ಮಾಡಲು ಬಂದಿದ್ದೇನೆ" ಎಂದು ಬೆದರಿಕೆ ಹಾಕಿದ ಬಳಿಕ ಸ್ವಾಮೀಜಿಗಳ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಆರೋಪಿಸಲಾಗಿದೆ.

ಈ ವೇಳೆ ಮಠದಲ್ಲಿದ್ದ ಬಾಲಕ ಸ್ವಾಮೀಜಿ ರಕ್ಷಣೆಗೆ ಮುಂದಾದಾಗ, ಆರೋಪಿ ಆತನನ್ನೂ ಬಲವಾಗಿ ತಳ್ಳಿದ್ದಾನೆ. ಬಳಿಕ ಪ್ಲಾಸ್ಟಿಕ್ ಕುರ್ಚಿಯನ್ನು ಬಳಸಿಕೊಂಡು ಮೃತ್ಯುಂಜಯ ಸ್ವಾಮೀಜಿಗಳ ಮೇಲೆ ಹಲ್ಲೆ ನಡೆಸಿ, ಅವರನ್ನು ಎಳೆದುಕೊಂಡು ಮಠದ ಗೇಟ್ ಹತ್ತಿರಕ್ಕೆ ತಳ್ಳಿದನು. ಅಲ್ಲದೆ "ಎಲ್ಲರೂ ನೋಡುತ್ತಿರುವಂತೆ ನಿನ್ನನ್ನು ಕೊಲ್ಲುತ್ತೇನೆ" ಎಂದು ಬೆದರಿಕೆ ಹಾಕಿ, ಸ್ವಾಮೀಜಿಯ ಕುತ್ತಿಗೆ ಹಿಡಿದು ಹಿಸುಕಲು ಯತ್ನಿಸಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

ಈ ವೇಳೆ ಮಠದ ಬಾಲಕ ಜೋರಾಗಿ ಕಿರುಚಿದ ಪರಿಣಾಮ ಮಠದ ಸಿಬ್ಬಂದಿ ಹಾಗೂ ಸುತ್ತಮುತ್ತಲಿನವರು ಸ್ಥಳಕ್ಕೆ ಧಾವಿಸಿ, ಆರೋಪಿ ಕೈಯಿಂದ ಸ್ವಾಮೀಜಿಯವರನ್ನು ರಕ್ಷಿಸಿದ್ದಾರೆ. ದಾಳಿಯಲ್ಲಿ ಸ್ವಾಮೀಜಿಯ ಮುಖ ಮತ್ತು ಕುತ್ತಿಗೆ ಭಾಗಗಳಿಗೆ ಗಾಯಗಳಾಗಿದ್ದು, ಗ್ರಾಮಸ್ಥರ ಸಹಾಯದಿಂದ ಅವರನ್ನು ತಕ್ಷಣವೇ ಚಿಕ್ಕನಾಯಕನಹಳ್ಳಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ.

ಘಟನೆ ಕುರಿತು ಮೃತ್ಯುಂಜಯ ಸ್ವಾಮೀ–ಜಿಗಳು ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಆರೋಪಿಯಾದ ಸಿದ್ಧರಾಮಯ್ಯ ವಿರುದ್ಧ ಕೊಲೆ ಯತ್ನ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ಆರಂಭಿಸಿದ್ದಾರೆ. ನಂತರ ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ಮಠಾಧಿಪತಿಗಳ ಮೇಲೆಯೇ ಹಲ್ಲೆ ನಡೆದಿರುವುದು ಸ್ಥಳೀಯ ಭಕ್ತರಲ್ಲಿ ಆತಂಕ ಹಾಗೂ ಅಸಮಾಧಾನ ಉಂಟುಮಾಡಿದ್ದು, ಮಠದ ಭದ್ರತೆ ಹೆಚ್ಚಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಪೊಲೀಸರು ಪ್ರಕರಣದ ಹಿನ್ನೆಲೆ, ಗೋಪುರ ನಿರ್ಮಾಣದ ವಿವಾದ ಮತ್ತು ದಾಳಿಗೆ ಕಾರಣವಾದ ವೈಯಕ್ತಿಕ ವೈಮನಸ್ಸುಗಳ ಬಗ್ಗೆ ಸಮಗ್ರ ತನಿಖೆ ನಡೆಸುತ್ತಿದ್ದಾರೆ.

## ಗಂಡನ ಚಿಕಿತ್ಸೆಗೆಂದು ಕೆಲಸ ಮಾಡ್ತಿದ್ದ ಮನೆಯಲ್ಲೇ ಕದ್ದು ಸಿಕ್ಕಿಬಿದ್ದ ಮಹಿಳೆ



**ಬೆಂಗಳೂರು:** ಕ್ಯಾನ್ಸರ್ ಪೀಡಿತ ಗಂಡನ ಚಿಕಿತ್ಸೆ ಖರ್ಚಿಗೆಂದು ಕೆಲಸ ಮಾಡ್ತಿದ್ದ ಮನೆಯಲ್ಲಿಯೇ ಹೆಂಡತಿಯೋರ್ವಳು ಬೆಳ್ಳಿ ಕದ್ದಿರುವ ಘಟನೆ ಸಂಬಂಧ ಜೀವನ ಭೀಮಾನಗರ ಪೊಲೀಸರು ಚೈತ್ರಾ ಎಂಬಾಕೆಯನ್ನು ಬಂಧಿಸಿದ್ದಾರೆ. ಪ್ರತಿಷ್ಠಿತ ಆಸ್ಪತ್ರೆ ಒಂದರಲ್ಲಿ ಸರ್ಜನ್ ಆಗಿದ್ದವರ ಮನೆಯಲ್ಲಿ ಕೆಲಸ ಮಾಡುತ್ತಿದ್ದ ಚೈತ್ರಾ, ಹಂತ ಹಂತವಾಗಿ ಒಂದೊಂದೇ ಬೆಳ್ಳಿ ಪಾತ್ರೆಯಂತೆ ಒಟ್ಟು ಒಟ್ಟು 12.5 ಕೆಜಿ ಬೆಳ್ಳಿ ದೋಚಿದ್ದಳು. ಈಕೆಯ ಗಂಡ ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದ ಹಿನ್ನೆಲೆ ಖರ್ಚಿಗೆ ಹೆಚ್ಚಿನ ಹಣದ ಅವಶ್ಯಕತೆ ಇತ್ತು. ಹೀಗಾಗಿ ಕಳೆದ ಒಂದೂವರೆ ವರ್ಷದಿಂದ ತಾನು ಕೆಲಸ ಮಾಡುತ್ತಿದ್ದ ಮನೆಯಲ್ಲಿ ಈಕೆ ಕಳ್ಳತನಕ್ಕೆ ಇಳಿದಿದ್ದಳು ಎನ್ನಲಾಗಿದೆ.

ಮಹಡಿ ಮೇಲೆ ಕೆಲ ಬೆಳ್ಳಿ ಸಾಮಗ್ರಿಗಳ ಕೂಡಿಟ್ಟಿದ್ದ ಮನೆಯವರು, ಹಬ್ಬದ ಸಂದರ್ಭದಲ್ಲಿ ಮಾತ್ರ ಆ ಪಾತ್ರೆಗಳನ್ನ ಉಪಯೋಗ ಮಾಡುತ್ತಿದ್ದರು. ಈ ಹಿನ್ನೆಲೆ ಅವುಗಳನ್ನು ಒಂದೊಂದಾಗಿ ಎಗರಿಸಿದ್ದ ಚೈತ್ರಾ, ಅವನ್ನು ಅಡವಿಟ್ಟು ಹಣ ಪಡೆದು ಬಳಕೆ ಮಾಡುತ್ತಿದ್ದಳು. ನಂತರ ಅನುಮಾನ ಬಾರದಂತೆ ಬಂದು ಅದೇ ಮನೆಯಲ್ಲಿ ಕೆಲಸ ಮಾಡುತ್ತಿದ್ದಳು. ದೀಪಾವಳಿ ಹಬ್ಬದ ನಂತರ ಆಕೆ ಕೆಲಸ ಬಿಟ್ಟಿದ್ದು, ದಸರಾ ಹಬ್ಬಕ್ಕೆ ಬೇಕೆಂದು ಪಾತ್ರೆ ಚೀಲ ಓಪನ್ ಮಾಡಿದ್ದ ಮನೆಯವರು ಶಾಕ್ ಆಗಿದ್ದಾರೆ. ಈ ವೇಳೆ ಬೆಳ್ಳಿ ಪಾತ್ರೆಗಳು, ಪೂಜಾ ಸಾಮಗ್ರಿಗಳು ಕಾಣೆಯಾಗಿರೋದು ಕುಟುಂಬಸ್ಥರ ಗಮನಕ್ಕೆ ಬಂದಿದೆ. ಅವರು ನೀಡಿದ್ದ ದೂರಿನ ಅನ್ವಯ ತನಿಖೆಗೆ ಮುಂದಾದ ಪೊಲೀಸರು, ಅನುಮಾನಗೊಂಡು ಮನೆ ಕೆಲಸದವರ ವಿಚಾರಣೆ ನಡೆಸಿದ್ದಾರೆ. ಚೈತ್ರಾಳ ವಿಚಾರಣೆ ವೇಳೆ ಬೆಳ್ಳಿ ಸಾಮಗ್ರಿ ಕಳ್ಳತನ ಮಾಡಿರುವ ಸತ್ಯ ಬಯಲಾಗಿದ್ದು, ಬಂಧಿತಳಿಂದ 35 ಲಕ್ಷ ಮೌಲ್ಯದ 12.5 ಕೆಜಿ ಬೆಳ್ಳಿ, 7.5 ಗ್ರಾಂ ಚಿನ್ನಾಭರಣ ವಶಕ್ಕೆ ಪಡೆಯಲಾಗಿದೆ.

ಚಿನ್ನದಂಗಡಿ ಮಾಲೀಕನ ಹೆಸರಿನಲ್ಲಿ ಸರ ಪಡೆದು ವಂಚಿಸಿದ ಆರೋಪಿಯನ್ನು ಬೆಂಗಳೂರಿನ ಭಾರತಿನಗರ ಪೊಲೀಸರು ಬಂಧಿಸಿದ್ದಾರೆ. ಪ್ರಕರಣ ಸಂಬಂಧ 5 ತಿಂಗಳ ಬಳಿಕ ರಾಜಸ್ಥಾನ ಮೂಲದ ಆರೋಪಿ ಧರ್ಮವೀರ್ ಸಿಂಗ್ ಬಂಧಿಸಲಾಗಿದ್ದು, ಸುಮಾರು 33 ಲಕ್ಷ ರೂ. ಮೌಲ್ಯದ 239 ಗ್ರಾಂ ಚಿನ್ನದ ಸರವನ್ನು ಈತನಿಂದ ವಶಕ್ಕೆ ಪಡೆಯಲಾಗಿದೆ. ಮಹಾವೀರ್ ಜ್ಯುವೆಲ್ಲರಿ ಶಾಪ್‌ನಲ್ಲಿ ಕೆಲಸ ಮಾಡ್ತಿದ್ದ ಧರ್ಮವೀರ್ ಸಿಂಗ್, ಬೇರೆ ಚಿನ್ನದ ಅಂಗಡಿಗಳ ಜೊತೆ ಎಕ್ಸ್‌ಚೇಂಜ್ ವ್ಯವಹಾರ ನಡೆಸುತ್ತಿದ್ದ. ಜ್ಯುವೆಲ್ಲರಿ ಅಂಗಡಿ ಮಾಲೀಕ ಹೈದರಾಬಾದ್‌ಗೆ ಹೋದಾಗ ಮಾಲೀಕನ ಹೆಸರು ಹೇಳಿ 7 ಲಾಂಗ್ ಚೈನ್ ಪಡೆದುಕೊಂಡಿದ್ದ ಆರೋಪಿ, ಅವುಗಳ ಸಮೇತ ರಾಜಸ್ಥಾನಕ್ಕೆ ಪರಾರಿಯಾಗಿದ್ದ. ಪೊಲೀಸರ ಕಣ್ಣುತಪ್ಪಿಸಿ 5 ತಿಂಗಳು ತಲೆಮರೆಸಿಕೊಂಡಿದ್ದ ಈತನನ್ನು ಕೊನೆಗೂ ಪೊಲೀಸರು ಖೆಡ್ಡಾಕ್ಕೆ ಕೆಡಿವಿದ್ದಾರೆ.

## ಕ್ಲೈಮ್ಯಾಕ್ಸ್ ಹಂತಕ್ಕೆ ಬಂದೇಬಿಡ್ತಾ ಕುರ್ಚಿ ಫೈಟ್!?: ಖಾಸಗಿ ಹೋಟೆಲ್‌ನಲ್ಲಿ ಡಿಕೆಶಿ ಬೆಂಬಲಿಗರ ಸಭೆ



**ಬೆಂಗಳೂರು:** ನಗರದಲ್ಲಿ ರಾಜ್ಯ ಕಾಂಗ್ರೆಸ್ ರಾಜಕೀಯದಲ್ಲಿ ನಾಯಕತ್ವ ಬದಲಾವಣೆ ಕುರಿತ ಚರ್ಚೆಗಳು ಮತ್ತೆ ಜೋರಾಗುತ್ತಿರುವ ಸೂಚನೆಗಳು ಕಂಡುಬಂದಿವೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಬೆಂಬಲಿಗ ಶಾಸಕರು ಮೆಖ್ರಿ ಸರ್ಕಲ್ ಸಮೀಪದ ಖಾಸಗಿ ಹೋಟೆಲ್‌ನಲ್ಲಿ ಡಿನ್ನರ್ ಸಭೆ ನಡೆಸಿರುವುದು ರಾಜಕೀಯ ವಲಯದಲ್ಲಿ ಸಾಕಷ್ಟು ಕುತೂಹಲ ಮತ್ತು ಚರ್ಚೆಗೆ ಕಾರಣವಾಗಿದೆ. ಅಧಿಕೃತವಾಗಿ ಈ ಕಾರ್ಯಕ್ರಮವನ್ನು ಮಾಗಡಿ ಕ್ಷೇತ್ರದ ಶಾಸಕ ಹೆಚ್.ಸಿ. ಬಾಲಕೃಷ್ಣ ಅವರ ಹುಟ್ಟುಹಬ್ಬದ ಔತಣವೆಂದು ತಿಳಿಸಲಾದರೂ, ಸಭೆಯೊಳಗೆ ನಾಯಕತ್ವ ಬದಲಾವಣೆ ಕುರಿತು ಗಂಭೀರ ಮಟ್ಟದ ಚರ್ಚೆಗಳು ನಡೆದಿವೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಹರಿದಾಡುತ್ತಿವೆ.

ಮೂಲಗಳ ಪ್ರಕಾರ, ಡಿ.ಕೆ. ಶಿವಕುಮಾರ್ ಅವರ ಬೆಂಬಲಿಗರು ಸುಮಾರು 60ಕ್ಕೂ ಹೆಚ್ಚು ಕಾಂಗ್ರೆಸ್ ಶಾಸಕರನ್ನು ಸಂಪರ್ಕಿಸಿ ಸಭೆಗೆ ಆಹ್ವಾನಿಸಿದ್ದರು. ಅವರಲ್ಲಿ ಸುಮಾರು 40 ಮಂದಿ ಶಾಸಕರು ನೇರವಾಗಿ ಸಭೆಯಲ್ಲಿ ಭಾಗವಹಿಸಿದ್ದರೆ, ಇನ್ನೂ ಕೆಲವರು ಮದುವೆ ಸಮಾರಂಭ, ವಿದೇಶ ಪ್ರವಾಸ ಹಾಗೂ ಇತರೆ ವೈಯಕ್ತಿಕ ಕಾರಣಗಳಿಂದ ಹಾಜರಾಗಲು ಸಾಧ್ಯವಾಗಿಲ್ಲ ಎಂದು ತಿಳಿದುಬಂದಿದೆ. ಆದಾಗ್ಯೂ, ಸಭೆಗೆ ಬಂದ ಶಾಸಕರ ಸಂಖ್ಯೆಯೇ ರಾಜಕೀಯವಾಗಿ ಮಹತ್ವದ್ದಾಗಿದೆ ಎಂಬ ವಿಶ್ಲೇಷಣೆಗಳು ಕೇಳಿಬರುತ್ತಿವೆ.

ಸಭೆಯಲ್ಲಿ ಭಾಗವಹಿಸಿದವರ ಪಟ್ಟಿ ಗಮನ ಸೆಳೆಯುವಂತಿದೆ. ಸಿ.ಪಿ. ಯೋಗೇಶ್ವರ್, ಕುಣಿಗಲ್ ರಂಗನಾಥ್, ಆನೇಕಲ್ ಶಿವಣ್ಣ, ಪಾವಗಡ ವೆಂಕಟೇಶ್, ಮದ್ದೂರು ಉದಯ್ ಗೌಡ, ಮಂಥರ್ ಗೌಡ, ಬಸವರಾಜ ಶಿವಗಂಗಾ, ಶರತ್ ಬಚ್ಚೇಗೌಡ, ಗಣಿಗ ರವಿಕುಮಾರ್, ಹೊನ್ನಾಳಿ ಶಾಂತನಗೌಡ ಸೇರಿದಂತೆ ಹಲವು ಶಾಸಕರು ಹಾಜರಿದ್ದರು. ಜೊತೆಗೆ ಸಚಿವರಾದ ಡಿ. ಸುಧಾಕರ್, ಮಂಕಾಳು ಸುಬ್ಬ ವೈದ್ಯ, ಪ್ರಕಾಶ್ ಕೋಳಿವಾಡ ಹಾಗೂ ನಯನ ಮೋಟಮ್ಮ ಸೇರಿದಂತೆ ಪ್ರಮುಖ ನಾಯಕರು ಕೂಡ ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯಲ್ಲಿ ಉಪಸ್ಥಿತರಿದ್ದ ಬಹುತೇಕ ನಾಯಕರು ಡಿ.ಕೆ. ಶಿವಕುಮಾರ್ ಅವರ ಬೆಂಬಲಿಗರೆಂದೇ ಗುರುತಿಸಿಕೊಂಡವರಾಗಿರುವುದು ರಾಜಕೀಯ ಮಹತ್ವ ಪಡೆದಿದೆ.


ಕಾರ್ಯಕ್ರಮದ ಬಳಿಕ ಹುಟ್ಟುಹಬ್ಬದ ಸಂಭ್ರಮಾಚರಣೆಯ ಭಾಗವಾಗಿ ಸುಮಾರು 18 ಮಂದಿ ಶಾಸಕರು ಒಟ್ಟಾಗಿ ನಿಂತಿರುವ ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಈ ಚಿತ್ರವನ್ನು ಉದ್ದೇಶಪೂರ್ವಕವಾಗಿ ಬಿಡುಗಡೆ ಮಾಡಲಾಗಿದೆ ಎಂಬ ಮಾತುಗಳು ಕೇಳಿಬರುತ್ತಿದ್ದು, ಇದರ ಹಿಂದೆ ರಾಜಕೀಯ ಸಂದೇಶವಿದೆ ಎಂಬ ವಿಶ್ಲೇಷಣೆಗಳು ನಡೆಯುತ್ತಿವೆ.

ಸಭೆಯಲ್ಲಿ ಮುಖ್ಯಮಂತ್ರಿ ಸ್ಥಾನ ಕುರಿತಾಗಿ ಗಂಭೀರ ಚರ್ಚೆಗಳು ನಡೆದಿವೆ ಎಂಬ ಮಾಹಿತಿ ಮೂಲಗಳಿಂದ ಹೊರಬಂದಿದೆ. ಮುಂದಿನ ವಿಧಾನಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ನಾಯಕತ್ವದ ಗೊಂದಲಕ್ಕೆ ಸ್ಪಷ್ಟತೆ ತರಬೇಕು ಮತ್ತು ಪಕ್ಷದೊಳಗಿನ ಅನಿಶ್ಚಿತತೆಗೆ ಅಂತಿಮ ತೆರೆ ಎಳೆಯಬೇಕು ಎಂಬ ಅಭಿಪ್ರಾಯವನ್ನು ಅನೇಕ ಶಾಸಕರು ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ. ಪಕ್ಷದ ಸಂಘಟನೆ ಮತ್ತು ಆಡಳಿತದ ಸಮನ್ವಯ ಬಲಪಡಿಸಲು ಸ್ಪಷ್ಟ ನಾಯಕತ್ವ ಅಗತ್ಯ ಎಂಬ ಮಾತುಗಳೂ ಸಭೆಯಲ್ಲಿ ಕೇಳಿಬಂದಿವೆ ಎನ್ನಲಾಗಿದೆ.

ಇದಕ್ಕೂ ಮುಂದಾಗಿ ಡಿ.ಕೆ. ಶಿವಕುಮಾರ್ ಬೆಂಬಲಿಗರು ಶೀಘ್ರದಲ್ಲೇ ದೆಹಲಿಗೆ ಭೇಟಿ ನೀಡುವ ಸಾಧ್ಯತೆಗಳ ಕು–ರಿತು ಚರ್ಚೆ ನಡೆದಿದೆ ಎಂದು ಮೂಲಗಳು ಸೂಚಿಸಿವೆ. ಸುಮಾರು 70ಕ್ಕೂ ಹೆಚ್ಚು ಶಾಸಕರು ಒಟ್ಟಾಗಿ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಮುಖ್ಯಮಂತ್ರಿ ಸ್ಥಾನ ಕುರಿತ ಅಂತಿಮ ನಿರ್ಧಾರಕ್ಕೆ ಒತ್ತಡ ಹೇರುವ ತಂತ್ರದ ಬಗ್ಗೆ ಚರ್ಚಿಸಲಾಗಿದೆ ಎನ್ನಲಾಗಿದೆ. ಮೊದಲು ಬೆಂಗಳೂರಿನಲ್ಲಿ ಮತ್ತೊಂದು ಸಮಾಲೋಚನಾ ಸಭೆ ನಡೆಸಿ, ಬಳಿಕ ದೆಹಲಿ ಪ್ರವಾಸಕ್ಕೆ ದಿನಾಂಕ ನಿಗದಿಪಡಿಸುವ ಯೋಚನೆಯೂ ನಡೆಯುತ್ತಿದೆ ಎಂದು ಹೇಳಲಾಗುತ್ತಿದೆ.

ಒಟ್ಟಿನಲ್ಲಿ, ಹುಟ್ಟುಹಬ್ಬದ ಔತಣದ ನೆಪದಲ್ಲಿ ನಡೆದ ಈ ಸಭೆ ರಾಜ್ಯ ಕಾಂಗ್ರೆಸ್‌ನಲ್ಲಿ ಮುಂದಿನ ರಾಜಕೀಯ ಬೆಳವಣಿಗೆಗಳಿಗೆ ವೇದಿಕೆ ಸಿದ್ಧಪಡಿಸಿದಂತೆ ಕಾಣುತ್ತಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ಒಳರಾಜಕೀಯ ಮತ್ತಷ್ಟು ಚರ್ಚೆಗೆ ಕಾರಣವಾಗುವ ಸಾಧ್ಯತೆಗಳಿವೆ.

## ಆರೋಗ್ಯಕರ ರಾಷ್ಟ್ರವು ಶಕ್ತಿಶಾಲಿ ಭವಿಷ್ಯ ನಿರ್ಮಿಸುತ್ತದೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್




**ಬೆಂಗಳೂರು:** ನಗರದ ಖಾಸಗಿ ಹೋಟೆಲ್‌ನಲ್ಲಿ ಶುಕ್ರವಾರ ನಡೆದ ಮಹಿಳಾ ಮಾನಸಿಕ ಆರೋಗ್ಯ ಶೃಂಗಸಭೆ "ಎಂಪವರಿಂಗ್ ಮೈಂಡ್ಸ್ 2026 [Women's Mental Health Summit"] ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಉದ್ಘಾಟಿಸಿ ಮಾತನಾಡಿದರು. ಈ ವೇಳೆ ಆರೋಗ್ಯಕರ ಕುಟುಂಬಗಳು ಆರೋಗ್ಯಕರ ರಾಷ್ಟ್ರ ನಿರ್ಮಾಣಕ್ಕೆ ಆಧಾರವಾಗುತ್ತವೆ ಮತ್ತು ಆರೋಗ್ಯಕರ ರಾಷ್ಟ್ರವೇ ಶಕ್ತಿಶಾಲಿ ಭವಿಷ್ಯವನ್ನು ಕಟ್ಟುತ್ತದೆ ಎಂಬ ಸಂದೇಶವನ್ನು ಅವರು ನೀಡಿದರು.

ಮಹಿಳೆಯರ ಆರೋಗ್ಯ, ವಿಶೇಷವಾಗಿ ಮಾನಸಿಕ ಆರೋಗ್ಯ, ಕುಟುಂಬ ಮತ್ತು ಸಮಾಜದ ಸ್ಥಿರತೆಗೆ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದ ಸಚಿವೆ, ಆರೋಗ್ಯಕರ ಮಹಿಳೆಯರು ಆರೋಗ್ಯಕರ ಕುಟುಂಬಗಳನ್ನು ರೂಪಿಸುತ್ತಾರೆ ಎಂಬುದನ್ನು ಒತ್ತಿ ಹೇಳಿದರು. ಮಹಿಳೆಯರು ತಮ್ಮದೇ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಕೇವಲ ವೈಯಕ್ತಿಕ ವಿಷಯವಲ್ಲ, ಅದು ಸಮಗ್ರ ಸಮಾಜದ ಅಭಿವೃದ್ಧಿಯೊಂದಿಗೆ ನೇರವಾಗಿ ಸಂಬಂಧ ಹೊಂದಿದೆ ಎಂದು ಅವರು ಅಭಿಪ್ರಾಯಪಟ್ಟರು.

ಮಾನಸಿಕ ಆರೋಗ್ಯ ಕ್ಷೇತ್ರದಲ್ಲಿ ಕಳೆದ ಹತ್ತು ವರ್ಷಗಳಿಂದ ನಿರಂತರ ಸೇವೆ ಸಲ್ಲಿಸುತ್ತಿರುವ [Mpower] ಸಂಸ್ಥೆಗೆ ಅಭಿನಂದನೆ ಸಲ್ಲಿಸಿದ ಸಚಿವೆ, ಬೆಂಗಳೂರು ನಗರದ ವಿಶೇಷತೆಯನ್ನೂ ಪ್ರಸ್ತಾಪಿಸಿದರು. ಹೊಸ ಆಲೋಚನೆಗಳು, ನವೀನತೆ ಮತ್ತು ವಿಭಿನ್ನವಾಗಿ ಯೋಚಿಸುವ ಧೈರ್ಯಕ್ಕೆ ಹೆಸರಾಗಿರುವ ಬೆಂಗಳೂರು ನಗರದಲ್ಲಿ ಮಹಿಳೆಯರ ಮಾನಸಿಕ ಆರೋಗ್ಯ ಕುರಿತು ಮುಕ್ತವಾಗಿ ಮಾತನಾಡುವ ವೇದಿಕೆಗಳು ಹೆಚ್ಚಾಗುತ್ತಿರುವುದು ಸಂತೋಷದ ಸಂಗತಿ ಎಂದು ಹೇಳಿದರು. ಮಹಿಳೆಯರು ತಮ್ಮ ಸಮಸ್ಯೆಗಳ ಬಗ್ಗೆ ಮಾತನಾಡುವ ಧೈರ್ಯ, ಇತರರು ಕೇಳುವ ಸಂವೇದನೆ ಮತ್ತು ಸಮಸ್ಯೆಗಳಿಗೆ ಕಾರ್ಯಗತ ಪರಿಹಾರ ಹುಡುಕುವ ದೃಢಸಂಕಲ್ಪ ಇಂದಿನ ಕಾಲಘಟ್ಟದಲ್ಲಿ ಅತ್ಯಂತ ಅಗತ್ಯವಾಗಿದೆ ಎಂದು ಅವರು ತಿಳಿಸಿದರು.

ಮಾನಸಿಕ ಆರೋಗ್ಯವನ್ನು ನಿರ್ಲಕ್ಷಿಸುವ ವಿಷಯವಾಗಿ ಕಾಣಬಾರದು; ಅದು ವ್ಯಕ್ತಿಯ ಜೀವನದ ಗುಣಮಟ್ಟ ಮತ್ತು ಕುಟುಂಬದ ಸಂತೋಷವನ್ನು ನಿರ್ಧರಿಸುವ ಪ್ರಮುಖ ಅಂಶವಾಗಿದೆ ಎಂದು ಸಚಿವೆ ಹೇಳಿದರು. ಮಹಿಳೆಯರು ಕುಟುಂಬ, ಸಮಾಜ ಮತ್ತು ಉದ್ಯೋಗ ಕ್ಷೇತ್ರಗಳ ಬೆನ್ನೆಲುಬಾಗಿದ್ದರೂ, ಅವರ ಬಲದ ಹಿಂದೆ ಅನೇಕ ಬಾರಿ ಮೌನವಾಗಿ ಹೊತ್ತಿರುವ ಭಾವನಾತ್ಮಕ ಹೊರೆ, ಜವಾಬ್ದಾ–ರಿಗಳು, ನಿರೀಕ್ಷೆಗಳು ಮತ್ತು ತ್ಯಾಗಗಳು ಅಡಗಿರುತ್ತವೆ ಎಂದು ಅವರು ಗಮನ ಸೆಳೆದರು. ನಗುಮುಖಗಳ ಹಿಂದೆ ಒತ್ತಡ ಮತ್ತು ಆತಂಕ ಅಡಗಿರುವ ಸಂದರ್ಭಗಳು ಸಾಕಷ್ಟು ಇವೆ, ಮತ್ತು ಬಲಿಷ್ಠವಾಗಿ ಕಾಣುವ ಅನೇಕ ಮಹಿಳೆಯರು ಕಾಣದ ಹೋರಾಟಗಳನ್ನು ಎದುರಿಸುತ್ತಿದ್ದಾರೆ ಎಂದು ಹೇಳಿದರು.

ಜೀವನದ ವಿಭಿನ್ನ ಹಂತಗಳಲ್ಲಿ ಮಹಿಳೆಯರು ಎದುರಿಸುವ ಸವಾಲುಗಳನ್ನೂ ಅವರು ವಿವರಿಸಿದರು. ವಿದ್ಯಾಭ್ಯಾಸದ ಒತ್ತಡವನ್ನು ಎದುರಿಸುವ ಬಾಲಕಿಯರಿಂದ ಹಿಡಿದು ಉದ್ಯೋಗ ಮತ್ತು ಕುಟುಂಬ ಜವಾಬ್ದಾರಿಗಳನ್ನು ಸಮತೋಲನಗೊಳಿಸುವ ಮಹಿಳೆಯರ ತನಕ, ತಾಯತ್ವದ ಹೊಣೆಗಾರಿಕೆಗಳನ್ನು ನಿರ್ವಹಿಸುವ ಮಹಿಳೆಯಿಂದ ಏಕಾಂತವನ್ನು ಅನುಭವಿಸುವ ವೃದ್ಧೆಯ ತನಕ ಪ್ರತಿ ಹಂತವೂ ಹೊಸ ಮಾನಸಿಕ ಸವಾಲುಗಳನ್ನು ತರುತ್ತದೆ ಎಂದು ಹೇಳಿದರು.

ರಾಜ್ಯದಲ್ಲಿ ಸಾವಿರಾರು ಮಹಿಳೆಯರು ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ ಎಂಬ ಅಧ್ಯಯನಗಳ ಉಲ್ಲೇಖ ಮಾಡುತ್ತಾ, ಇವು ಕೇವಲ ಅಂಕಿ–ಅಂಶಗಳಲ್ಲ; ಪ್ರತಿಯೊಂದು ಅಂಕಿ ಒಂದು ಜೀವನ, ಒಂದು ಕುಟುಂಬ ಮತ್ತು ಒಂದು ಭವಿಷ್ಯವನ್ನು ಪ್ರತಿನಿಧಿಸುತ್ತದೆ ಎಂದು ಸಚಿವೆ ತಿಳಿಸಿದರು. ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸುವ ಜವಾಬ್ದಾರಿ ಒಂದೇ ಸಂಸ್ಥೆಯ ಮೇಲಾಗಿರಬಾರದು; ಸಮಾಜದ ಎಲ್ಲ ಘಟಕಗಳು ಸೇರಿ ಕಾರ್ಯನಿರ್ವಹಿಸಬೇಕಾಗಿದೆ ಎಂದು ಅವರು ಹೇಳಿದರು. ಸರ್ಕಾರ, ಸಂಸ್ಥೆಗಳು ಹಾಗೂ ಸಮುದಾಯಗಳೆಲ್ಲರ ಸಹಕಾರದಿಂದ ಮಾತ್ರ ಸಮಗ್ರ ಪರಿಹಾರ ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಮಹಿಳೆಯರ ಸಬಲೀಕರಣ ಮತ್ತು ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ವಿವಿಧ ಕಾರ್ಯಕ್ರಮಗಳ ಬಗ್ಗೆ ಮಾತನಾಡಿದ ಸಚಿವೆ, ಮಹಿಳೆಯರ ಆರ್ಥಿಕ ಸ್ವಾವಲಂಬನೆಯನ್ನು ಬಲಪಡಿಸುವ ಉದ್ದೇಶದಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಹೇಳಿದರು. ಗೃಹಲಕ್ಷ್ಮಿ ಯೋಜನೆಯಡಿ ಮಹಿಳೆಯರಿಗೆ ಪ್ರತಿ ತಿಂಗಳು 2,000 ಆರ್ಥಿಕ ನೆರವು ನೀಡಲಾಗುತ್ತಿದೆ. ಶಕ್ತಿ ಯೋಜನೆಯ ಮೂಲಕ ರಾಜ್ಯದಾದ್ಯಂತ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಸೌಲಭ್ಯ ಒದಗಿಸಲಾಗಿದೆ. ಮಹಿಳೆಯರ ಸಮಗ್ರ ಸಬಲೀಕರಣವೇ ಸರ್ಕಾರದ ಪ್ರಮುಖ ಗು–ರಿಯಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಆದಿತ್ಯ ಬಿರ್ಲಾ ಎಜುಕೇಶನ್ ಟ್ರಸ್ಟ್ ಸಂಸ್ಥಾಪಕಿ ನೀರಜಾ ಬಿರ್ಲಾ, ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ ಮೂರ್ತಿ ಸೇರಿದಂತೆ ಮಾನಸಿಕ ಆರೋಗ್ಯ ತಜ್ಞರಾದ ಇಮೋನ್ ಮ್ಯಾಕ್ ಕ್ರೊರಿ, ಪೀಟರ್ ಫೋನಗಿ, ಡಾ. ಶ್ಯಾಮ್ ಭಟ್, ಡುರು ಶಾ ಮತ್ತು ಹಲವಾರು ತಜ್ಞರು ಭಾಗವಹಿಸಿ ಮಹಿಳೆಯರ ಮಾನಸಿಕ ಆರೋಗ್ಯ ಕುರಿತ ಚರ್ಚೆಗಳಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಈ ಶೃಂಗಸಭೆ ಮಹಿಳೆಯರ ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಹೆಚ್ಚಿಸುವುದರ ಜೊತೆಗೆ ಸಮಾಜದಲ್ಲಿ ಮುಕ್ತ ಸಂವಾದಕ್ಕೆ ವೇದಿಕೆ ಕಲ್ಪಿಸಿತು.

## ವಿಶ್ವ ವಿಖ್ಯಾತ ಬೆಂಗಳೂರು ಕರಗಕ್ಕೆ ಮುಹೂರ್ತ ಫಿಕ್ಸ್!



**ಬೆಂಗಳೂರು:** ಸಿಲಿಕಾನ್ ಸಿಟಿಯ ಅತ್ಯಂತ ಪ್ರಾಚೀನ, ಸಾಂಸ್ಕೃತಿಕವಾಗಿ ಮಹತ್ವ ಹೊಂದಿರುವ ಮತ್ತು ಜನಪ್ರಿಯ ಹಬ್ಬಗಳಲ್ಲಿ ಒಂದಾದ ಬೆಂಗಳೂರು ಕರಗ ಮಹೋತ್ಸವದ ದಿನಾಂಕಗಳು ನಿಗದಿಯಾಗಿದ್ದು, ಭಕ್ತರಲ್ಲಿ ಈಗಾಗಲೇ ಸಂಭ್ರಮದ ವಾತಾವರಣ ನಿರ್ಮಾಣವಾಗಿದೆ. ಬೆಂಗಳೂರಿನ ತಿಗಳರಪೇಟೆಯಲ್ಲಿರುವ ಪ್ರಸಿದ್ಧ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ಬಾರಿಯೂ ಅದ್ದೂರಿ ಧಾರ್ಮಿಕ ಆಚರಣೆಗಳೊಂದಿಗೆ ಕರಗ ಉತ್ಸವ ಜರುಗಲಿದ್ದು, ಒಟ್ಟು 11 ದಿನಗಳ ಕಾಲ ವಿವಿಧ ವಿಧಿವಿಧಾನಗಳು ಮತ್ತು ಸಂಪ್ರದಾಯಗಳೊಂದಿಗೆ ಮಹೋತ್ಸವ ನಡೆಯಲಿದೆ.

ಈ ವರ್ಷದ ಉತ್ಸವದ ಪ್ರಮುಖ ವಿಶೇಷವೆಂದರೆ ಅನುಭವೀ ಅರ್ಚಕರಾದ ಜ್ಞಾನೇಂದ್ರ ಸ್ವಾಮಿ ಅವರು ಸತತ 16ನೇ ಬಾರಿ ಕರಗವನ್ನು ಹೊರುವ ಭಾಗ್ಯಕ್ಕೆ ಪಾತ್ರರಾಗಿರುವುದು. ಹಲವು ವರ್ಷಗಳ ಅನುಭವ, ಅಚಲ ಭಕ್ತಿ ಮತ್ತು ಶ್ರದ್ಧೆಯೊಂದಿಗೆ ಕರಗ ಸೇವೆಯನ್ನು ನಿರ್ವಹಿಸುತ್ತಿರುವ ಅವರು, ಈ ಸಂಪ್ರದಾಯಿಕ ಉತ್ಸವಕ್ಕೆ ವಿಶೇಷ ಮೆರುಗು ನೀಡುತ್ತಿದ್ದಾರೆ. ಮಲ್ಲಿಗೆ ಹೂವಿನಿಂದ ಅಲಂಕೃತವಾಗಿರುವ ಭಾರೀ ಕರಗವನ್ನು ತಲೆಯ ಮೇಲೆ ಹೊತ್ತು ಸಮತೋಲನ ಕಾಪಾಡಿಕೊಂಡು ನಗರದ ವಿವಿಧ ಬೀದಿಗಳಲ್ಲಿ ಸಂಚರಿಸುವ ಅವರ ಕೌಶಲ್ಯ ಮತ್ತು ಸಮರ್ಪಣೆ ಕರಗ ಮಹೋತ್ಸವದ ಪ್ರಮುಖ ಆಕರ್ಷಣೆಯಾಗಿ ಭಕ್ತರನ್ನು ಮಂತ್ರಮುಗ್ಧರನ್ನಾಗಿಸುತ್ತದೆ.

ಕರಗ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳು ಮಾರ್ಚ್ ತಿಂಗಳಿನಿಂದಲೇ ಆರಂಭವಾಗಲಿದ್ದು, ಪ್ರಮುಖ ದಿನಾಂಕಗಳು ಈ ಕೆಳಗಿನಂತಿವೆ. ಮಾರ್ಚ್ 24, 2026ರಂದು ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ಧ್ವಜಾರೋಹಣ ನೆರವೇ–ರಿಸುವ ಮೂಲಕ 11 ದಿನಗಳ ಉತ್ಸವಕ್ಕೆ ಅಧಿಕೃತ ಚಾಲನೆ ದೊರೆಯಲಿದೆ. ನಂತರ ಮಾರ್ಚ್ 30, 2026ರಂದು ರಾತ್ರಿ ವೇಳೆ ಅತ್ಯಂತ ಭಕ್ತಿಭಾವದಿಂದ 'ಹಸಿಕರಗ' ಮಹೋತ್ಸವ ನಡೆಯಲಿದ್ದು, ಇದು ಮುಖ್ಯ ಕರಗಕ್ಕೆ ಪೂರ್ವಭಾವಿಯಾಗಿ ನಡೆಯುವ ಪವಿತ್ರ ಆಚರಣೆಯಾಗಿದೆ. ಏಪ್ರಿಲ್ 1, 2026ರಂದು ಚೈತ್ರ ಪೌರ್ಣಮಿಯ ಶುಭ ಸಂದರ್ಭದಲ್ಲಿ ಮಧ್ಯರಾತ್ರಿ ವಿಶ್ವವಿಖ್ಯಾತ ಹೂವಿನ ಕರಗ ಮೆರವಣಿಗೆ ಆರಂಭವಾಗಲಿದೆ. ಈ ಮೆರವಣಿಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಗರದ ಪೇಟೆ ಪ್ರದೇಶಗಳ ಮೂಲಕ ಸಾಗುತ್ತಾ ಆಧ್ಯಾತ್ಮಿಕ ಉತ್ಸಾಹವನ್ನು ಹರಡಲಿದೆ.

ಕರಗ ಉತ್ಸವದ ವಿಶೇಷ ಸಂಪ್ರದಾಯಗಳಲ್ಲಿ ಒಂದಾಗಿ ಕರಗ ಹೊತ್ತ ಅರ್ಚಕರು ನಗರದ ತವಕಲ್ ಮಸ್ತಾನ್ ದರ್ಗಾಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸುವುದು ಗಮನಾರ್ಹವಾಗಿದೆ. ಶತಮಾನಗಳಿಂದ ಮುಂದುವರಿದಿರುವ ಈ ಆಚರಣೆ ಬೆಂಗಳೂರು ನಗರದ ಧಾರ್ಮಿಕ ಸೌಹಾರ್ದತೆ ಮತ್ತು ಭಾವೈಕ್ಯತೆಯನ್ನು ಪ್ರತಿಬಿಂಬಿಸುವ ಮಹತ್ವದ ಸಂಕೇತವಾಗಿದೆ.

ಮೆರವಣಿಗೆಯ ಉದ್ದಕ್ಕೂ ಸಾವಿರಾರು ವೀರಕುಮಾರರು ಕೆಂಪು ವಸ್ತ್ರ ಧರಿಸಿ 'ಗೋವಿಂದಾ ಗೋವಿಂದಾ' ಎಂಬ ಘೋಷಣೆಗಳ ನಡುವೆ ಕತ್ತಿ ವರಸೆ ಪ್ರದರ್ಶಿಸುತ್ತಾ ಕರಗಕ್ಕೆ ಭದ್ರತೆ ಒದಗಿಸಲಿದ್ದಾರೆ. ವೀರಕುಮಾರರ ಸಾಹಸಮಯ ಮತ್ತು ಶಿಸ್ತಿನ ಪ್ರದರ್ಶನ ಕರಗ ಮಹೋತ್ಸವದ ಮತ್ತೊಂದು ಪ್ರಮುಖ ಆಕರ್ಷಣೆಯಾಗಿದ್ದು, ಈ ದೃಶ್ಯ ನೋಡುಗರಲ್ಲಿ ಭಕ್ತಿಭಾವದ ಜೊತೆಗೆ ರೋಮಾಂಚನ ಉಂಟುಮಾಡುತ್ತದೆ.

ಉತ್ಸವಕ್ಕೆ ದೇಶ–ವಿದೇಶಗಳಿಂದ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆ ಇರುವುದರಿಂದ ಬಿಬಿಎಂಪಿ ಮತ್ತು ಬೆಂಗಳೂರು ಪೊಲೀಸ್ ಇಲಾಖೆ ಈಗಿನಿಂದಲೇ ಸಿದ್ಧತೆಗಳನ್ನು ಆರಂಭಿಸಿವೆ. ಮೆರವಣಿಗೆ ಸಾಗುವ ಪೇಟೆ ಪ್ರದೇಶಗಳ ರಸ್ತೆಗಳ ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಲಾಗಿದ್ದು, ಸ್ವಚ್ಛತೆ, ಕುಡಿಯುವ ನೀರು ಹಾಗೂ ಬೀದಿ ದೀಪಗಳ ಸಮರ್ಪಕ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೊತೆಗೆ ಸಿಸಿಟಿವಿ ಕ್ಯಾಮೆರಾಗಳ ಅಳವಡಿಕೆ, ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜನೆ ಮತ್ತು ಜನಸಂದಣಿ ನಿಯಂತ್ರಣ–ಕ್ಕೆ ವಿಶೇಷ ಯೋಜನೆಗಳನ್ನು ರೂಪಿಸಿ ಭದ್ರತಾ ಕ್ರಮಗಳನ್ನು ಬಲಪಡಿಸಲಾಗಿದೆ.

ಒಟ್ಟಿನಲ್ಲಿ, ಆಧ್ಯಾತ್ಮಿಕತೆ, ಸಂಪ್ರದಾಯ, ಸಾಂಸ್ಕೃತಿಕ ವೈಭವ ಮತ್ತು ಸಾಮಾಜಿಕ ಸೌಹಾರ್ದತೆಯನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಬೆಂಗಳೂರು ಕರಗ ಮಹೋತ್ಸವವು ಈ ಬಾರಿಯೂ ಭಕ್ತರ ಭಾವನೆಗಳಿಗೆ ಮತ್ತಷ್ಟು ಉತ್ಸಾಹ ತುಂಬಲಿದ್ದು, ನಗರದೆಲ್ಲೆಡೆ ಹಬ್ಬದ ಸಂಭ್ರಮವನ್ನು ಹರಡುವ ನಿರೀಕ್ಷೆ ಇದೆ.

## ಸಮಾಧಿಯಿಂದ ಶವ ಹೊರತೆಗೆದು ಪರೀಕ್ಷೆ ಪತಿಯ ಸಾವಿನ ಹಿಂದೆ ರಹಸ್ಯವೇ?



**ತುಮಕೂರು:** ತಾಲ್ಲೂಕಿನ ಹೆಬ್ಬೂರು ಹೋಬಳಿಯ ದಾಸರಹಳ್ಳಿ ಗ್ರಾಮದಲ್ಲಿ ಅನುಮಾನಾಸ್ಪದ ಸಾವು ಪ್ರಕರಣೊಂದು ಬೆಳಕಿಗೆ ಬಂದು ಗ್ರಾಮಸ್ಥರು ಹಾಗೂ ಕುಟುಂಬದವರಲ್ಲಿ ಆತಂಕಕ್ಕೆ ಕಾರಣವಾಗಿದೆ. ಪತಿ ಮೃತಪಟ್ಟ ಕೆಲವೇ ದಿನಗಳಲ್ಲಿ ಪತ್ನಿ ಮತ್ತೊಂದು ಮದುವೆಯಾಗಿರುವ ಘಟನೆ ಹಿನ್ನೆಲೆಯಲ್ಲಿ ಮೃತ ವ್ಯಕ್ತಿಯ ಸಾವಿನ ಬಗ್ಗೆ ಗಂಭೀರ ಅನುಮಾನಗಳು ವ್ಯಕ್ತವಾಗಿದ್ದು, ಪ್ರಕರಣಕ್ಕೆ ಹೊಸ ತಿರುವು ದೊರೆತಿದೆ. ವ್ಯಕ್ತಿ ಮೃತಪಟ್ಟ 23 ದಿನಗಳ ಬಳಿಕ ಶವವನ್ನು ಹೊರತೆಗೆದು ಮರಣೋತ್ತರ ಪರೀಕ್ಷೆ ನಡೆಸಿರುವುದು ಪ್ರಕರಣದ ಗಂಭೀರತೆಯನ್ನು ಸೂಚಿಸುತ್ತದೆ.

ದಾಸರಹಳ್ಳಿ ಗ್ರಾಮದ ನಿವಾಸಿ ಪರಮೇಶ್ (50) ಅವರು ಜನವರಿ 31ರಂದು ಹೃದಯಾಘಾತದಿಂದ ಮೃತಪಟ್ಟಿದ್ದಾರೆ ಎಂದು ಕುಟುಂಬದವರು ತಿಳಿಸಿದ್ದಾರೆ. ಮೃತದೇಹಕ್ಕೆ ಅದೇ ದಿನ ಅಂತ್ಯಕ್ರಿಯೆ ನೆರವೇರಿಸಿ ಗ್ರಾಮದಲ್ಲೇ ಮಣ್ಣಿನಲ್ಲಿ ಸಮಾಧಿ ಮಾಡಲಾಗಿತ್ತು. ಆದರೆ ಪರಮೇಶ್ ಸಾವಿನ ಕೆಲವೇ ದಿನಗಳ ಬಳಿಕ, ಅಂದರೆ ಫೆಬ್ರವರಿ 19ರಂದು ಅವರ ಪತ್ನಿ ಮತ್ತೊಂದು ಮದುವೆಯಾಗಿರುವುದು ಸಂಬಂಧಿಕರಲ್ಲಿ ಅನುಮಾನಕ್ಕೆ ಕಾರಣವಾಗಿದೆ. ಈ ಬೆಳವಣಿಗೆ ಮೃತನ ಸಾವಿನ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಈ ಹಿನ್ನೆಲೆಯಲ್ಲಿ ಮೃತನ ಸಹೋದರಿ ಹೆಬ್ಬೂರು ಪೊಲೀಸ್ ಠಾಣೆಗೆ ದೂರು ನೀಡಿ ತಮ್ಮ ಸಹೋದರನ ಸಾವು ಸಹಜವಲ್ಲ ಎಂಬ ಶಂಕೆ ವ್ಯಕ್ತಪಡಿಸಿದ್ದಾರೆ. ಪರಮೇಶ್ ಮೃತಪಟ್ಟ ವೇಳೆ ಅವರ ಮೂಗಿನ ಪಕ್ಕದಲ್ಲಿ ಗಾಯದ ಗುರುತು ಕಾಣಿಸಿಕೊಂಡಿದ್ದುದಾಗಿ ಹಾಗೂ ಗುಪ್ತಾಂಗ ಭಾಗ ಊದಿಕೊಂಡಿದ್ದುದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಶಾರೀರಿಕ ಲಕ್ಷಣಗಳು ಸಹಜ ಮರಣದ ಸೂಚನೆಗಳಲ್ಲ ಎಂದು ಅವರು ಹೇಳಿ ಸಾವಿನ ಕುರಿತು ಸಂಪೂರ್ಣ ತನಿಖೆ ನಡೆಸುವಂತೆ ಪೊಲೀಸರಲ್ಲಿ ಮನವಿ ಮಾಡಿದ್ದಾರೆ. ಈ ಅಂಶಗಳು ಪ್ರಕರಣದ ಮೇಲೆ ಮತ್ತಷ್ಟು ಅನುಮಾನ ಮೂಡಿಸುವಂತಾಗಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಇನ್ನೊಂದೆಡೆ, ಮಹಿಳೆ ಈ ಹಿಂದೆ ಗಂಡನನ್ನು ಕಳೆದುಕೊಂಡಿದ್ದಳು ಮತ್ತು ಬಳಿಕ ಪರಮೇಶ್ ಅವರನ್ನು ಮದುವೆಯಾಗಿದ್ದಳು ಎಂದು ತಿಳಿದುಬಂದಿದೆ. ದಂಪತಿಗೆ ಇಬ್ಬರು ಮಕ್ಕಳು ಇದ್ದು, ಮಕ್ಕಳಿಗೆ ಹುಟ್ಟಿನಿಂದಲೂ ಆರೋಗ್ಯ ಸಮಸ್ಯೆಗಳು ಇರುವುದರಿಂದ ಅವರನ್ನು ಒಬ್ಬಳೇ ನೋಡಿಕೊಳ್ಳುವುದು ಕಷ್ಟಕರವಾಗಿತ್ತು. ಈ ಕಾರಣದಿಂದಲೇ ಜೀವನ ನಿರ್ವಹಣೆಗೆ ನೆರವಾಗುವ ಉದ್ದೇಶದಿಂದ ಮತ್ತೊಮ್ಮೆ ಮದುವೆಯಾಗಿರುವುದಾಗಿ ಮಹಿಳೆ ಪೊಲೀಸರಿಗೆ ಸ್ಪಷ್ಟನೆ ನೀಡಿದ್ದಾಳೆ ಎಂದು ಮೂಲಗಳು ತಿಳಿಸಿವೆ.

ದೂರು ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಮುಂದಿನ ತನಿಖೆಗೆ ಕೈ ಹಾಕಿದ್ದಾರೆ. ತಹಸೀಲ್ದಾರ್ ರಾಜೇಶ್ವರಿ ಅವರ ಸಮ್ಮುಖದಲ್ಲಿ ಸಮಾಧಿಯಲ್ಲಿದ್ದ ಶವವನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ. ಅನುಮಾನಾಸ್ಪದ ಸಾವು ಪ್ರಕರಣವಾಗಿರುವುದರಿಂದ ವೈದ್ಯರು ಸಂಪೂರ್ಣ ಹಾಗೂ ಸೂಕ್ಷ್ಮ ಪರಿಶೀಲನೆ ನಡೆಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆಯ ವರದಿ ಒಂದು ವಾರದೊಳಗೆ ಲಭ್ಯವಾಗುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪೋಸ್ಟ್‌ಮಾರ್ಟಂ ವರದಿ ಬಂದ ಬಳಿಕ ಪರಮೇಶ್ ಅವರ ಸಾವಿನ ನಿಜವಾದ ಕಾರಣ ಸ್ಪಷ್ಟವಾಗಲಿದ್ದು, ವರದಿ ಆಧಾರದಲ್ಲಿ ಪೊಲೀಸರು ಮುಂದಿನ ಕಾನೂನು ಕ್ರಮ ಕೈಗೊಳ್ಳಲಿದ್ದಾರೆ. ಪ್ರಕರಣದ ಬೆಳವಣಿಗೆಗಳತ್ತ ಗ್ರಾಮಸ್ಥರು ಮತ್ತು ಕುಟುಂಬದವರು ಆತುರದಿಂದ ಕಾದು ನೋಡುತ್ತಿದ್ದು, ತನಿಖೆಯ ಫಲಿತಾಂಶದಿಂದ ಸಾವಿನ ಹಿಂದಿನ ಸತ್ಯ ಬಹಿರಂಗವಾಗುವ ನಿರೀಕ್ಷೆ ವ್ಯಕ್ತವಾಗಿದೆ.

## ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಪಿಡಿಒ




**ಚಿಕ್ಕಮಗಳೂರು :** ಜಿಲ್ಲೆಯ ಕಡೂರು ತಾಲೂಕಿನ ತಂಗ್ಲಿ ಗ್ರಾಮ ಪಂಚಾಯತಿಯ ಪಿಡಿಒ ನಂಜುಂಡಮ್ಮ ಅವರು 5 ಸಾವಿರ ರೂ. ಲಂಚ ಪಡೆಯುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಸರಸ್ವತಿಪುರದ ತಿಮ್ಮಶೆಟ್ಟಿ ಎಂಬುವವರಿಂದ ಸೈಟ್‌ಗೆ ದೃಢೀಕರಣ ಪತ್ರ ನೀಡಲು ಲಂಚದ ಬೇಡಿಕೆ ಇಟ್ಟಿದ್ದರೆಂದು ಆರೋಪಿಸಲಾಗಿದೆ. ಗ್ರಾಮ ಪಂಚಾಯಿತಿ ಕಚೇರಿಯಲ್ಲೇ ಹಣ ಸ್ವೀಕರಿಸುವ ವೇಳೆ ಲೋಕಾಯುಕ್ತ ಅಧಿಕಾ–ರಿಗಳು ದಾಳಿ ನಡೆಸಿ ಅವರನ್ನು ಹಿಡಿದಿದ್ದಾರೆ.

ಲೋಕಾಯುಕ್ತ ಡಿವೈಎಸ್‌ಪಿ ತಿರುಮಲೇಶ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದ್ದು, ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿದು ಬಂದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near vFloor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ವಿದ್ಯಾರ್ಥಿನಿಯರನ್ನೇ ಗುರಿಯಾಗಿಸಿಕೊಂಡಿದ್ದ ಮಾದಕ ಜಾಲ ಬಯಲು





**ಬೆಂಗಳೂರು:** ನಗರದಲ್ಲಿ ಕಾಲೇಜು ಯುವತಿಯ ಮೇಲೆ ನಡೆದಿರುವ ಸಾಮೂಹಿಕ ಅತ್ಯಾಚಾರ ಆರೋಪ ಪ್ರಕರಣದ ತನಿಖೆ ವೇಳೆ ಆತಂಕಕಾರಿ ಮತ್ತು ಬೆಚ್ಚಿಬೀಳಿಸುವ ಮಾಹಿತಿಗಳು ಬೆಳಕಿಗೆ ಬಂದಿವೆ. ಯುವತಿಯರನ್ನು ಮಾದಕ ದ್ರವ್ಯಗಳ ಬಲೆಗೆ ಸಿಲುಕಿಸಿ, ನಂತರ ಲೈಂಗಿಕ ದೌರ್ಜನ್ಯ ಎಸಗಿ, ಅದರ ವಿಡಿಯೋ ಮತ್ತು ಫೋಟೊಗಳನ್ನು ದಾಖಲಿಸಿ ಬ್ಲಾಕ್‌ಮೇಲ್ ಮಾಡುತ್ತಿದ್ದ ದೊಡ್ಡ ಜಾಲವೊಂದನ್ನು ಅಮೃತಹಳ್ಳಿ ಪೊಲೀಸರು ಪತ್ತೆಹಚ್ಚಿದ್ದಾರೆ. ಈ ಪ್ರಕರಣದಲ್ಲಿ ನಿಖಿಲ್ ಮತ್ತು ಡಿಕ್ಸನ್ ಪ್ರಮುಖ ಆರೋಪಿಗಳಾಗಿದ್ದು, ಇವರಲ್ಲಿ ನಿಖಿಲ್ ಈ ಸಂಪೂರ್ಣ ಜಾಲದ ಮಾಸ್ಟರ್‌ಮೈಂಡ್ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಪೊಲೀಸರ ಪ್ರಾಥಮಿಕ ಮಾಹಿತಿಯ ಪ್ರಕಾರ, ಆರೋಪಿಗಳು ಇನ್‌ಸ್ಟಾಗ್ರಾಮ್ ಸೇರಿದಂತೆ ಸಾಮಾಜಿಕ ಜಾಲತಾಣಗಳ ಮೂಲಕ ಪ್ರತಿಷ್ಠಿತ ಕಾಲೇಜುಗಳ ಯುವತಿಯರೊಂದಿಗೆ ಸ್ನೇಹ ಬೆಳೆಸುತ್ತಿದ್ದರು. ಸ್ನೇಹ ಬೆಳೆಸಿದ ಬಳಿಕ ಪಾರ್ಟಿ, ಫೋಟೋಶೂಟ್, ಮಾಡೆಲಿಂಗ್ ಅವಕಾಶಗಳ ನೆಪದಲ್ಲಿ ಅವರನ್ನು ಆಹ್ವಾನಿಸುತ್ತಿದ್ದರು. ಆರಂಭದಲ್ಲಿ ಪಬ್‌ಗಳು ಮತ್ತು ಕೆಫೆಗಳಲ್ಲಿ ಸಾಮಾನ್ಯವಾಗಿ ಭೇಟಿಯಾಗುತ್ತಿದ್ದು, ಯಾವುದೇ ಅನುಮಾನ ಮೂಡದಂತೆ ವರ್ತಿಸುತ್ತಿದ್ದರು. ನಂತರ ಆಫ್ಟರ್ ಪಾರ್ಟಿ ನೆಪದಲ್ಲಿ ವಿಲ್ಲಾಗಳಿಗೆ ಕರೆದುಕೊಂಡು ಹೋಗಿ, ಅಲ್ಲಿ ಡ್ರಗ್ಸ್ ಬೆರೆಸಿದ ಪಾನೀಯಗಳನ್ನು ನೀಡಿ ಅಥವಾ ನೇರವಾಗಿ ಮಾದಕ ದ್ರವ್ಯಗಳನ್ನು ಬಳಸಿ ಯುವತಿಯರನ್ನು ಪ್ರಜ್ಞಾಹೀನರನ್ನಾಗಿಸುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ.

ಯುವತಿಯರು ಪ್ರಜ್ಞಾಹೀನರಾಗಿದ ಬಳಿಕ ಅವರ ಮೇಲೆ ಅತ್ಯಾಚಾರ ಎಸಗಿ, ಬೆತ್ತಲೆ ವಿಡಿಯೋಗಳು ಮತ್ತು ಫೋಟೋಗಳನ್ನು ತೆಗೆದು ಬ್ಲಾಕ್‌ಮೇಲ್ ಮಾಡುತ್ತಿದ್ದರು ಎಂದು ತನಿಖೆಯಲ್ಲಿ ಬಹಿರಂಗವಾಗಿದೆ. ಈ ದೃಶ್ಯಗಳನ್ನು ಆಧಾರವಾಗಿ ಬಳಸಿಕೊಂಡು ಸಂತ್ರಸ್ತರನ್ನು ಮರುಮರು ಶೋಷಣೆಗೊಳಪಡಿಸುತ್ತಿದ್ದರೆಂಬ ಆರೋಪವೂ ಕೇಳಿಬಂದಿದೆ. ಪಾರ್ಟಿಯ ನಂತರ ಆರೋಪಿಗಳು ಏನೂ ನಡೆದಿಲ್ಲ ಎಂಬಂತೆ ವರ್ತಿಸಿ, ಮದ್ಯದ ನಶೆಯಲ್ಲಿದ್ದೆವು, ಏನಾಯಿತು ಎಂಬುದು ಗೊತ್ತಿಲ್ಲ ಎಂದು ನಾಟಕವಾಡುತ್ತಿದ್ದರು ಎಂದು ತಿಳಿದುಬಂದಿದೆ. ಅನೇಕ ಯುವತಿಯರು ಸಾಮಾಜಿಕ ಗೌರವ ಮತ್ತು ಭಯದಿಂದ ಪೊಲೀಸ್ ಠಾಣೆಗೆ ದೂರು ನೀಡಲು ಹಿಂಜರಿದಿದ್ದರೆಂಬ ಮಾಹಿತಿ ಲಭ್ಯವಾಗಿದೆ. ಆದರೆ ಇತ್ತೀಚೆಗೆ ನಡೆದ ಘಟನೆಯಲ್ಲಿ ಯುವತಿಯೋರ್ವಳು ಧೈರ್ಯವಾಗಿ ದೂರು ನೀಡಿದ ಪರಿಣಾಮ ಆರೋಪಿಗಳ ಅಸಲಿ ಮುಖ ಬಹಿರಂಗಗೊಂಡಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಮಾರು 19 ಯುವತಿಯರು ದೌರ್ಜನ್ಯ ಅನುಭವಿಸಿರುವ ಕುರಿತು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಮಾದಕ ದ್ರವ್ಯ ಜಾಲದ ಹಿಂದೆ ರಾಜಕೀಯ ಹಾಗೂ ಪ್ರಭಾವಿ ವ್ಯಕ್ತಿಗಳ ಸಂಪರ್ಕವಿದೆಯೇ ಎಂಬ ಕೋನದಲ್ಲೂ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.


ಆರೋಪಿಗಳು ಯುವತಿಯರನ್ನು ಬಲೆಗೆ ಬೀಳಿಸುತ್ತಿದ್ದ ವಿಧಾನವೂ ತನಿಖೆಯಲ್ಲಿ ಸ್ಪಷ್ಟವಾಗಿದೆ. ಡಿಕ್ಸನ್ ಮತ್ತು ಇತರರು ಇನ್‌ಸ್ಟಾಗ್ರಾಮ್ ಮೂಲಕ ಯುವತಿಯರನ್ನು ಸಂಪರ್ಕಿಸಿ ಫೋಟೋಶೂಟ್, ಮಾಡೆಲಿಂಗ್ ಅಥವಾ ಪಾರ್ಟಿ ಅವಕಾಶಗಳ ನೆಪದಲ್ಲಿ ವಿಶ್ವಾಸ ಗಳಿಸುತ್ತಿದ್ದರು. ಆರಂಭದಲ್ಲಿ ಯಾವುದೇ ಅಸಭ್ಯ ವರ್ತನೆ ತೋರದೆ ನಂಬಿಕೆ ಮೂಡಿಸಿದ ಬಳಿಕ, ಖಾಸಗಿ ವಿಲ್ಲಾಗಳಲ್ಲಿ ನಡೆಯುವ ಆಫ್ಟರ್ ಪಾರ್ಟಿಗಳಿಗೆ ಆಹ್ವಾನಿಸಿ ಲೈಂಗಿಕ ಸಹಕಾರಕ್ಕಾಗಿ ಒತ್ತಾಯಿಸುತ್ತಿದ್ದರು. ಕೆಲವರು ಒಪ್ಪಿಕೊಂಡರೆ, ನಿರಾಕರಿಸಿದವರಿಗೆ ಬಲವಂತವಾಗಿ ಮಾದಕ ದ್ರವ್ಯ ನೀಡಿ ಲೈಂಗಿಕ ದೌರ್ಜನ್ಯ ಎಸಗಲಾಗುತ್ತಿತ್ತು ಎಂದು ಆರೋಪಿಸಲಾಗಿದೆ.

ಆರೋಪಿಗಳು ಮುಖ್ಯವಾಗಿ ಪ್ರತಿಷ್ಠಿತ ಕಾಲೇಜುಗಳ ಹಾಗೂ ಅನ್ಯ ರಾಜ್ಯಗಳಿಂದ ಬೆಂಗಳೂರಿಗೆ ಬಂದಿರುವ ಯುವತಿಯರನ್ನು ಗುರಿಯಾಗಿಸಿಕೊಂಡಿದ್ದರು ಎಂದು ತಿಳಿದುಬಂದಿದೆ. ದೂರು ನೀಡಿರುವ ಸಂತ್ರಸ್ತ ಯುವತಿ ಮೂಲತಃ ತಮಿಳುನಾಡಿನವಳಾಗಿದ್ದು, ಡಿಕ್ಸನ್ ಪ್ರೀತಿಯ ನೆಪದಲ್ಲಿ ಆಕೆಯನ್ನು ಸಂಪರ್ಕಿಸಿ ವಿಶ್ವಾಸ ಗಳಿಸಿದ್ದಾನೆ. ನಂತರ ಪಾರ್ಟಿಗೆ ಕರೆದುಕೊಂಡು ಹೋಗಿ, ಆಕೆ ಸಹಕರಿಸಲು ನಿರಾಕರಿಸಿದಾಗ ಮಾದಕ ದ್ರವ್ಯ ನೀಡಿ ಇಬ್ಬರು ಆರೋಪಿಗಳು ಬಲವಂತವಾಗಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಇನ್ನೊಂದೆಡೆ, ಯುವತಿ ಫೆಬ್ರವರಿ 21ರಂದು ದೂರು ನೀಡುವ ಮೊದಲು, ಆರೋಪಿ ನಿಖಿಲ್ ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ಯುವತಿಯೇ ತನ್ನನ್ನು ಬ್ಲಾಕ್‌ಮೇಲ್ ಮಾಡುತ್ತಿದ್ದಾಳೆ ಎಂದು ದೂರು ದಾಖಲಿಸಿದ್ದಾನೆ ಎಂಬುದು ಪ್ರಕರಣಕ್ಕೆ ಮತ್ತೊಂದು ತಿರುವು ನೀಡಿದೆ. ಬಳಿಕ ಯುವತಿಯ ದೂರಿನ ಆಧಾರದಲ್ಲಿ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ಸಾಮೂಹಿಕ ಅತ್ಯಾಚಾರ ಪ್ರಕರಣ ದಾಖಲಾಗಿದ್ದು, ಆರೋಪಿಗಳು ಸಂತ್ರಸ್ತೆಯನ್ನೇ ತಪ್ಪಿತಸ್ಥಳಾಗಿ ಬಿಂಬಿಸಲು ಯತ್ನಿಸಿದ್ದರು ಎಂಬ ಅನುಮಾನವೂ ವ್ಯಕ್ತವಾಗಿದೆ.

ಪ್ರಕರಣ ಸಂಬಂಧ ಸಕಲೇಶಪುರ ಮೂಲದ ನಿಖಿಲ್ ಮತ್ತು ಪಶ್ಚಿಮ ಬಂಗಾಳ ಮೂಲದ ಮತ್ತೊಬ್ಬ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಹೆಚ್ಚಿನ ವಿಚಾರಣೆ ಮುಂದುವರೆದಿದೆ. ಈ ಜಾಲದ ವ್ಯಾಪ್ತಿ, ಇನ್ನಷ್ಟು ಸಂತ್ರಸ್ತರಿರುವ ಸಾಧ್ಯತೆ ಹಾಗೂ ಇತರರ ಪಾತ್ರದ ಕುರಿತು ಪೊಲೀಸರು ಸಮಗ್ರ ತನಿಖೆ ನಡೆಸುತ್ತಿದ್ದಾರೆ. ಪ್ರಕರಣವು ನಗರದ ಯುವತಿಯರ ಸುರಕ್ಷತೆ ಕುರಿತು ಗಂಭೀರ ಚರ್ಚೆಗೆ ಕಾರಣವಾಗಿದ್ದು, ಸಾಮಾಜಿಕ ಜಾಲತಾಣಗಳ ಮೂಲಕ ನಡೆಯುತ್ತಿರುವ ಅಪರಾಧ ಚಟುವಟಿಕೆಗಳ ಬಗ್ಗೆ ಎಚ್ಚರಿಕೆ ಅಗತ್ಯವಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗುತ್ತಿವೆ.

# ಪದ್ದತಿ ನಿರ್ಮೂಲನೆ ಎಲ್ಲರ ಸಹಕಾರದಿಂದ ಸಾಧ್ಯ– ಎಡಿಸಿ ಸೈಯಿದಾ ಆಯಿಷಾ



**ಬೆಂಗಳೂರು ಗ್ರಾಮಾಂತರ ಜಿಲ್ಲೆ:** ಜೀತ ಪದ್ಧತಿಯಂತಹ ಸಾಮಾಜಿಕ ಪಿಡುಗು ಕೆಲವು ಭಾಗಗಳಲ್ಲಿ ಇಂದಿಗೂ ಜೀವಂತವಾಗಿದೆ, ಅಧಿಕಾರಿಗಳು ಹಾಗೂ ಸಾರ್ವಜನಿಕರ ಸಮನ್ವಯತೆಯಿಂದ ಜೀತ ಪದ್ಧತಿಯ ನಿರ್ಮೂಲನೆ ಮಾಡಲು ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಹೇಳಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ "ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ: ಒಂದು ದಿನದ ಕಾರ್ಯಾಗಾರ"ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ಜೀತ ಪದ್ಧತಿಯು ಹೆಚ್ಚಾಗಿ ಕಂಡುಬರುತ್ತಿತ್ತು, ಕಾಲಾ ಕ್ರಮೇಣ ಕಡಿಮೆ ಆಗುತ್ತಿದೆ. ಆದರೂ ಸಹ ಸಾಮಾಜಿಕ–ಆರ್ಥಿಕ ಅಸಮಾನತೆಗಳಿಂದಾಗಿ ಇಂದಿಗೂ ಜೀತ ಪದ್ಧತಿ ವ್ಯವಸ್ಥೆ ಜೀವಂತವಾಗಿದೆ ಎಂದರು.

ಶಿಕ್ಷಣ,ಕಾನೂನು, ಜಾಗೃತಿ, ಸಮಾನತೆಯಿಂದ ಜೀತ ಪದ್ಧತಿ ನಿರ್ಮೂಲನೆ ಮಾಡಲು ಸಾಧ್ಯ. ಜೀತ ಪದ್ಧತಿಯ ನಿರ್ಮೂಲನೆಗೆ ವಿವಿಧ ಇಲಾಖೆಗಳು, ಸ್ವಯಂ ಸೇವಕ ಸಂಘಗಳು, ಸಮುದಾಯಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಜೀತ ಪದ್ಧತಿಗೆ ಒತ್ತಾಯಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಎಲ್ಲಾದರೂ ಜೀತ ಪದ್ಧತಿ ವ್ಯವಸ್ಥೆ ಕಂಡುಬಂದಲ್ಲಿ ಅಥವಾ ಬಲವಂತವಾಗಿ ದುಡಿಸಿಕೊಳ್ಳುವ ಪರಿಸ್ಥಿತಿ ಕಂಡು ಬಂದಲ್ಲಿ ಸಾರ್ವಜನಿಕರು ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಎಂದರು. ಶಾಶ್ವತ ಪುನರ್ವಸತಿ ಕಲ್ಪಿಸುವ ಸಂಬಂಧ ಜೀತ ವಿಮುಕ್ತರಿಗೆ ಎಕರೆ ಭೂಮಿಯನ್ನು ಉಚಿತವಾಗಿ ನೀಡಲು ಕೋರಿ ಜಿಲ್ಲಾಧಿಕಾರಿ ಪತ್ರ ಬರೆಯಲಾಗಿದೆ. ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ (ಫಲಾನುಭವಿ ಆಧಾರಿತ) ಸೌಲಭ್ಯ ಕಲ್ಪಿಸಲು ಅಗತ್ಯ ಕ್ರಮ ವಹಿಸುವಂತೆ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

**157 ಜೀತದಾಳುಗಳಿಗೆ ಪುನರ್ವಸತಿ:**ಜಿಲ್ಲೆಯನ್ನು 2020 ರಲ್ಲಿ ಜೀತ ಮುಕ್ತ ಎಂದು ಘೋಷಿಸಲಾಗಿದ್ದು, 164 ಜೀತದಾಳುಗಳನ್ನು ವಿಮುಕ್ತಿಗೊಳಿಸಲಾಗಿದೆ, ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ 157 ಜೀತ ದಾಳುಗಳಿಗೆ ತಲಾ 20,000 ರೂ.ಗಳಂತೆ 31.40 ಲಕ್ಷ ರೂ.ಗಳು ನೀಡಲಾಗಿದೆ. ಇಬ್ಬರಿಗೆ ನಿವೇಶನ ನೀಡಲಾಗಿದ್ದು, 43 ಜನರಿಗೆ ವಸತಿ ಒದಗಿಸಲಾಗಿದೆ. 54 ಜನರಿಗೆ ನರೇಗಾ ಜಾಬ್ ಕಾರ್ಡ್, 156 ಜನರಿಗೆ ಮತದಾನ ಗುರುತಿನ ಚೀಟಿ, 112 ಜನರಿಗೆ ಬ್ಯಾಂಕ್ ಗಳಿಂದ ಸಾಲ ಧನಸಹಾಯ ನೀಡಲಾಗಿದೆ.

ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಡಾ. ಕಿರಣ ಕಮಲ ಪ್ರಸಾದ ರವರು ಮಾತನಾಡಿ, ಜೀತ ಕಾರ್ಮಿಕ ಪದ್ಧತಿ (ರದ್ದತಿ) ಕಾಯ್ದೆ 1976 ಜೀತ ಪದ್ಧತಿ ವ್ಯಾಖ್ಯಾನ, ಜೀತ ಕಾರ್ಮಿಕ ಪದ್ಧತಿಗೆ ಒತ್ತಾಯಿಸುವವರ ವಿರುದ್ಧ ಕಾಯ್ದೆಯಡಿ ನಿಗದಿಗೊಳಿಸಿರುವ ಕಾನೂನು ಶಿಕ್ಷೆ, ಜೀತ ವಿಮುಕ್ತರ ಪುನರ್ವಸತಿ ಯೋಜನೆ (RBL Scheme), ಜೀತ ಕಾರ್ಮಿಕರ ಗುರುತಿಸುವಿಕೆ, ರಕ್ಷಣೆ ಹಾಗೂ ಪುನರ್ವಸತಿ ಕುರಿತಂತೆ ಕೇಂದ್ರ ಸರ್ಕಾರವು ಹೊರಡಿಸಿರುವ ಮಾದರಿ ಕಾರ್ಯವಿಧಾನಗಳ ಕುರಿತು ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಅವರು ಜೀತ ಪದ್ಧತಿ ನಿರ್ಮೂಲನೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಾಗಾರದಲ್ಲಿ ಜಿ.ಪಂ ಯೋಜನಾ ನಿರ್ದೇಶಕ ವಿಠ್ಠಲ್ ಕಾವ್ಳೆ, ಜಿಲ್ಲಾ ಮೇಲುಸ್ತುವರಿ ಸಮಿತಿ ಸದಸ್ಯ ಮ್ಯಾತ್ಯು ಮುನಿಯಪ್ಪ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ, ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಲಾರಿಗೆ ಕಾರು ಡಿಕ್ಕಿ ಮೂವರು ದುರ್ಮರಣ, ಇಬ್ಬರು ಗಂಭೀರ



**ಚಿತ್ರದುರ್ಗ:** ಜಿಲ್ಲೆಯ ಚಳ್ಳಕೆರೆ ತಾಲೂಕಿನ ಹಿರೆಹಳ್ಳಿ ಸಮೀಪ ನಿಂತಿದ್ದ ಲಾರಿಗೆ ಕಾರೊಂದು ಡಿಕ್ಕಿಯಾದ ಪರಿಣಾಮ ಮೂವರು ದಾರುಣವಾಗಿ ಸಾವನ್ನಪ್ಪಿದ ಘಟನೆ ಸಂಭವಿಸಿದೆ. ಈ ಅಪಘಾತ ಸ್ಥಳೀಯರನ್ನು ಬೆಚ್ಚಿಬೀಳಿಸುವಂತಾಗಿದ್ದು, ಮೃತರ ಕುಟುಂಬಗಳಲ್ಲಿ ಆಕ್ರಂದನ ಮನೆಮಾಡಿದೆ.

ಮಾಹಿತಿಯ ಪ್ರಕಾರ, ತುಮಕೂರು ಜಿಲ್ಲೆಯ ಕುಣಿಗಲ್ ಮೂಲದ ಐವರು ಭಕ್ತರು ಕಾರಿನಲ್ಲಿ ಮಂತ್ರಾಲಯಕ್ಕೆ ತೆರಳಿ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಮಾಡಿಕೊಂಡು ಹಿಂದಿರುಗುತ್ತಿದ್ದರು. ಮಂತ್ರಾಲಯದಿಂದ ಕುಣಿಗಲ್ ಕಡೆಗೆ ಪ್ರಯಾಣಿಸುತ್ತಿದ್ದ ವೇಳೆ ಹಿರೆಹಳ್ಳಿ ಸಮೀಪ ಈ ದುರ್ಘಟನೆ ಸಂಭವಿಸಿದೆ. ಕಾರಿನ ಚಾಲಕನ ಅಜಾಗರೂಕತೆ ಮತ್ತು ಅತಿವೇಗವೇ ಅಪಘಾತಕ್ಕೆ ಪ್ರಮುಖ ಕಾರಣವಾಗಿರಬಹುದು ಎಂದು ಪ್ರಾಥಮಿಕವಾಗಿ ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ.

ಡಿಕ್ಕಿಯ ತೀವ್ರತೆಗೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ವಾಹನದ ಮುಂಭಾಗ ಗಂಭೀರವಾಗಿ ಹಾನಿಗೊಳಗಾಗಿದೆ. ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಗುಬ್ಬಿ ತಾಲೂಕಿನ ಹೊಸಕೆರೆ ಗ್ರಾಮದ ನರಸಿಂಹಮೂರ್ತಿ (38), ಗಂಗಾಧರ್ (35) ಹಾಗೂ ಲೋಹಿತ್ (40) ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ. ಡಿಕ್ಕಿಯ ರಭಸಕ್ಕೆ ಚಾಲಕನ ಬದಿಯಲ್ಲಿ ಕುಳಿತಿದ್ದ ವ್ಯಕ್ತಿಯ ತಲೆ ಗಂಭೀರವಾಗಿ ಗಾಯಗೊಂಡಿದ್ದು, ಘಟನೆಯ ಭೀಕರತೆಯನ್ನು ಸೂಚಿಸುತ್ತದೆ.

ಅಪಘಾತದಲ್ಲಿ ಇನ್ನಿಬ್ಬರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣವೇ ಚಳ್ಳಕೆರೆ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಆರೋಗ್ಯ ಸ್ಥಿತಿ ಕುರಿತು ವೈದ್ಯರು ನಿಗಾವಹಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯ ಮಾಹಿತಿ ತಿಳಿದ ಕೂಡಲೇ ಚಿತ್ರದುರ್ಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತದ ಪರಿಸ್ಥಿತಿ ಮತ್ತು ಕಾರಣಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ಮುಂದಿನ ಕ್ರಮಗಳ ಬಗ್ಗೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ತಳಕು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಅಪಘಾತದ ನಿಖರ ಕಾರಣ ಪತ್ತೆಹಚ್ಚಲು ತನಿಖೆ ಮುಂದುವರೆಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ನಂತರ ಕುಟುಂಬದವರಿಗೆ ಹಸ್ತಾಂತರಿಸುವ ಕ್ರಮ ಕೈಗೊಳ್ಳಲಾಗಿದೆ. ರಸ್ತೆ ಅಪಘಾತದ ಈ ದುರ್ಘಟನೆ ಭಕ್ತರ ಸಂತೋಷಕರ ಪ್ರಯಾಣವನ್ನು ಕ್ಷಣಾರ್ಧದಲ್ಲಿ ದುಃಖದ ಘಟನೆಯಾಗಿ ಮಾರ್ಪಡಿಸಿದೆ.

# ಉದ್ಯೋಗಾವಕಾಶದಲ್ಲಿ ಸ್ಥಳೀಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಿ: ಸಚಿವ ಕೆ.ಹೆಚ್ ಮುನಿಯಪ್ಪ




**ಬೆಂಗಳೂರು ಗ್ರಾಮಾಂತರ ಜಿಲ್ಲೆ:** ಕೈಗಾರಿಕಾ ಅಭಿವೃದ್ಧಿಗೆ ತಮ್ಮ ಜಮೀನುಗಳನ್ನು ನೀಡಿರುವ ರೈತರ ಕುಟುಂಬಗಳಿಗೆ ಉದ್ಯೋಗಾವಕಾಶಗಳಲ್ಲಿ ಆದ್ಯತೆ ನೀಡುವುದು ಅತ್ಯಂತ ಅಗತ್ಯ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಅಭಿಪ್ರಾಯಪಟ್ಟರು. ಕೈಗಾರಿಕಾ ವಿಕಾಸದಿಂದ ಉಂಟಾಗುವ ಲಾಭ ಸ್ಥಳೀಯರಿಗೆ ತಲುಪಬೇಕು ಮತ್ತು ಭೂವಂಚಿತ ಕುಟುಂಬಗಳ ಮಕ್ಕಳಿಗೆ ಉದ್ಯೋಗದಲ್ಲಿ ಮೊದಲ ಅವಕಾಶ ದೊರೆಯುವಂತೆ ಕಂಪನಿಗಳು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ದೊಡ್ಡಬಳ್ಳಾಪುರ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ದೊಡ್ಡಬಳ್ಳಾಪುರ ತಾಲೂಕು ಆಡಳಿತ ಹಾಗೂ ತಾಲೂಕು ಕೈಗಾರಿಕೆಗಳ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ತಾಲ್ಲೂಕು ಮಟ್ಟದ ಉದ್ಯೋಗ ಮೇಳವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಜಿಲ್ಲೆಯ ಕೈಗಾರಿಕಾ ವಿಸ್ತರಣೆಯು ಸ್ಥಳೀಯ ಯುವಕರಿಗೆ ಉದ್ಯೋಗದ ಹೊಸ ಅವಕಾಶಗಳನ್ನು ಸೃಷ್ಟಿಸಬೇಕು ಎಂಬುದನ್ನು ಒತ್ತಿ ಹೇಳಿದರು.

ದೊಡ್ಡಬಳ್ಳಾಪುರ ಪ್ರದೇಶವು ಜಿಲ್ಲೆಯಲ್ಲಿ ಅತಿಹೆಚ್ಚು ಕೈಗಾರಿಕಾ ವಲಯ ಹೊಂದಿರುವ ಭಾಗವಾಗಿದ್ದು, ಸುಮಾರು 10 ಸಾವಿರ ಎಕರೆ ಜಮೀನು ಕೈಗಾರಿಕಾ ಪ್ರದೇಶಕ್ಕೆ ಒಳಪಟ್ಟಿದೆ ಎಂದು ಅವರು ವಿವರಿಸಿದರು. ಇಂತಹ ಪರಿಸ್ಥಿತಿಯಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ಭೂಮಿ ನೀಡಿದ ಕುಟುಂಬಗಳಿಗೆ ಸರ್ಕಾರ ಹಾಗೂ ಕೈಗಾರಿಕೆಗಳು ಸೌಲಭ್ಯ ಕಲ್ಪಿಸಬೇಕಿದ್ದು, ಉದ್ಯೋಗಾವಕಾಶಗಳಲ್ಲಿ ಆದ್ಯತೆ ನೀಡುವುದು ನ್ಯಾಯಸಮ್ಮತ ಕ್ರಮವಾಗಲಿದೆ ಎಂದು ಹೇಳಿದರು.

ಉದ್ಯೋಗಕ್ಕಾಗಿ ತಯಾರಾಗುತ್ತಿರುವ ಯುವಕರು ಅಗತ್ಯ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ಪಡೆಯಲು ಜಿಲ್ಲಾಡಳಿತವನ್ನು ಸಂಪರ್ಕಿಸಬಹುದು ಎಂದು ಸಚಿವರು ತಿಳಿಸಿದರು. ಉದ್ಯೋಗ ಮಾರುಕಟ್ಟೆಯ ಬೇಡಿಕೆಗಳಿಗೆ ಅನುಗುಣವಾಗಿ ತರಬೇತಿ ನೀಡಲು ಸರ್ಕಾರ ಸಿದ್ಧವಾಗಿದ್ದು, ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಇನ್ನಷ್ಟು ಬಲಪಡಿಸಲಾಗುವುದು ಎಂದರು. ತಾಲೂಕು ಮಟ್ಟದಲ್ಲಿ ಇಂತಹ ಉದ್ಯೋಗ ಮೇಳಗಳನ್ನು ಆಯೋಜಿಸುವುದು ವಿದ್ಯಾರ್ಥಿಗಳು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ಅತ್ಯಂತ ಉಪಯುಕ್ತವಾಗಿದ್ದು, ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟದಲ್ಲೂ ದೊಡ್ಡ ಉದ್ಯೋಗ ಮೇಳವನ್ನು ಏರ್ಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕ ಧೀರಜ್ ಮುನಿರಾಜು ಮಾತನಾಡಿ, ದೊಡ್ಡಬಳ್ಳಾಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಾಲೂಕಿನಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಶಿಕ್ಷಣ ಸಂಸ್ಥೆಯಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಈಗಾಗಲೇ ತಾಲೂಕಿನಲ್ಲಿ 10 ಸಾವಿರಕ್ಕೂ ಹೆಚ್ಚು ಉದ್ಯೋಗಾವಕಾಶಗಳು ಲಭ್ಯವಿರುವುದರಿಂದ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣದ ಅಗತ್ಯ ಹೆಚ್ಚಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ದೊಡ್ಡಬಳ್ಳಾಪುರಕ್ಕೆ ಡಿಪ್ಲೊಮಾ ಕಾಲೇಜು ಮಂಜೂರಾದರೆ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಮತ್ತು ಕೈಗಾರಿಕಾ ವಲಯದ ಅಗತ್ಯಗಳಿಗೆ ತಕ್ಕಂತೆ ತಾಂತ್ರಿಕ ಪರಿಣತಿ ಹೊಂದಿದ ಯುವಕರನ್ನು ರೂಪಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಡಿಪ್ಲೊಮಾ ಕಾಲೇಜು ಸ್ಥಾಪನೆಯಿಂದ ವಿದ್ಯಾರ್ಥಿಗಳು ಓದು ಮುಗಿದ ತಕ್ಷಣ ಉದ್ಯೋಗ ಪಡೆಯಲು ಹೆಚ್ಚು ಅವಕಾಶಗಳು ಸಿಗಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಜೊತೆಗೆ ಪ್ರತಿ ಆರು ತಿಂಗಳಿಗೊಮ್ಮೆ ತಾಲೂಕು ಮಟ್ಟದಲ್ಲಿ ಉದ್ಯೋಗ ಮೇಳಗಳನ್ನು ನಡೆಸುವ ಮೂಲಕ ಯುವಕರಿಗೆ ನಿರಂತರ ಉದ್ಯೋಗ ಮಾಹಿತಿ ಮತ್ತು ಅವಕಾಶಗಳನ್ನು ಒದಗಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಉಪ ವಿಭಾಗಾಧಿಕಾರಿ ದುರ್ಗಾಶ್ರೀ, ಕೈಗಾರಿಕಾ ಜಂಟಿ ನಿರ್ದೇಶಕ ನರೇಂದ್ರ ಬಾಬು, ಡಿವೈಎಸ್ಪಿ ಪಾಂಡುರಂಗ, ತಹಶೀಲ್ದಾರ್ ಮಲ್ಲಪ್ಪ ಯರಗೋಳ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಗನ್ನಾಥ್, ಕಾಲೇಜು ಪ್ರಾಂಶುಪಾಲ ಸದಾಶಿವ ರಾಮಚಂದ್ರಗೌಡ ಸೇರಿದಂತೆ ವಿವಿಧ ಕಂಪನಿಗಳ ಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಹೆಚ್ಚಿನ ಸಂಖ್ಯೆಯ ಉದ್ಯೋಗಾಕಾಂಕ್ಷಿಗಳು ಭಾಗವಹಿಸಿದ್ದರು. ಉದ್ಯೋಗ ಮೇಳದಲ್ಲಿ ವಿವಿಧ ಕ್ಷೇತ್ರಗಳ ಕಂಪನಿಗಳು ಭಾಗವಹಿಸಿ ಯುವಕರಿಗೆ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡಿದ್ದು, ಹಲವರು ಸ್ಥಳದಲ್ಲಿಯೇ ಸಂದರ್ಶನ ಪ್ರಕ್ರಿಯೆಯಲ್ಲೂ ಪಾಲ್ಗೊಂಡರು.

# ಪತ್ರಿಕೋದ್ಯಮದ ಕನ್ನಡಿಯಲ್ಲಿ ಭಾರತದ 70% ಜನಸಂಖ್ಯೆ ಇರುವ ಹಳ್ಳಿಗಳು ಕಾಣಲಿ: ಕೆ.ವಿ.ಪಿ ಕರೆ



**ಗದಗ:** ತಾಯಿ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ತಮ್ಮ ಸುಖ ತ್ಯಾಗ ಮಾಡಿದ ತಾಯಿ–ತಂದೆಯರನ್ನು ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿ ಹೆಸರಲ್ಲಿ ಮಾಡುತ್ತಿರುವುದು ಮಾದರಿಯಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಶ್ಲಾಘಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಸಹಯೋಗದಲ್ಲಿ ಆಯೋಜಿಸಿದ್ದ "ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ದತ್ತಿ ನಿಧಿ ಕಾರ್ಯಕ್ರಮದಲ್ಲಿ "ತನುಜಾ ನಾಯಕ" ಅವರಿಗೆ ದತ್ತಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಅವ್ವ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿ ಆಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ ಎಂದರು.

ಶರಣರ ಬಾಳನ್ನು ಮರಣದಲ್ಲಿ ಕಾಣು ಎನ್ನುವ ಮಾತೊಂದಿದೆ. ಶರಣರು ಮರಣ ನಂತರವೂ ಜನ ಮಾನಸದಲ್ಲಿ ಬದುಕುತ್ತಾರೆ.
ಇವತ್ತಿನ ಈ ಕಾರ್ಯಕ್ರಮವೇ ಅವ್ವ ಗುರವ್ವ ಅವರ ಸಂಸ್ಕಾರ ಮತ್ತು ಚೈತನ್ಯ ಜೀವಂತಿಕೆಗೆ ಸಾಕ್ಷಿಯಾಗಿದೆ ಎಂದು ವಿವರಿಸಿದರು.

ಇಂಥಾ ಆದರ್ಶಪ್ರಾಯ ಅವ್ವನವರ ಹೆಸರಿನ ಪ್ರಶಸ್ತಿಗೆ ತನುಜಾ ನಾಯಕ ಅವರನ್ನು ಆಯ್ಕೆ ಮಾಡಿರುವುದು ಹೆಚ್ಚು ಸೂಕ್ತವಾಗಿದೆ. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನಗಳನ್ನು ನಿರಂತರವಾಗಿ ಬರೆಯುತ್ತಿರುವ ತನುಜಾ ನಾಯಕ ಅವರ "ಸಾಮಾಜಿಕ ನೋಟ" ಇವತ್ತಿನ ಕಿರಿಯ ವೃತ್ತಿವಾಂದವರಿಗೆ ಮಾದರಿಯಾಗಿದ್ದಾರೆ ಎಂದರು.

ಗ್ರಾಮೀಣ ಪತ್ರಿಕೋದ್ಯಮ ಅಂದ ಕೂಡಲೇ ನನಗೆ ತಕ್ಷಣ ನೆನಪಾಗುವುದು ಪಿ.ಸಾಯಿನಾಥ್ ಅವರು.
ಇವರು ಬರೆದಿರುವ ["Every body loves good drought"] ಎನ್ನುವ ಪುಸ್ತಕ "ಗ್ರಾಮೀಣ ಪತ್ರಿಕೋದ್ಯದ ಬೈಬಲ್" ಎಂದು ಕರೆಯಬಹುದು. ಈ ಪುಸ್ತಕ "ಬರ ಅಂದರೆ ಎಲ್ಲರಿಗೂ ಇಷ್ಟ" ಎಂದು ಕನ್ನಡದಲ್ಲೂ ಬಂದಿದೆ. ನಗರ ಕೇಂದ್ರಿತ ಪತ್ರಿಕೋದ್ಯಮ "ಅಭಿವೃದ್ಧಿ" ಎಂದರೆ ಕೇವಲ ಜಿಡಿಪಿ ಬೆಳವಣಿಗೆ ಅಥವಾ ಷೇರು ಮಾರುಕಟ್ಟೆಯ ಏರಿಳಿತವನ್ನು ಮಾತ್ರ ಅಭಿವೃದ್ಧಿ ಎಂದು ಬಿಂಬಿಸುತ್ತವೆ. ಆದರೆ ನಿಜವಾದ ಅಭಿವೃದ್ಧಿ ಎಂದರೆ ಗ್ರಾಮೀಣ ಭಾಗದ ಜನರ ಜೀವನಮಟ್ಟ ಸುಧಾರಿಸುವುದು ಮತ್ತು ಗ್ರಾಮೀಣ ಆರ್ಥಿಕತೆ ಬೆಳವಣಿಗೆಯೇ ನಿಜವಾದ ಅಭಿವೃದ್ಧಿ ಎನ್ನುವುದನ್ನು ನಾವು ಮರೆಯಬಾರದು ಎಂದರು.

ಕೇಂದ್ರ ಸರ್ಕಾರ ನೋಟು ನಿಷೇಧ ಜಾರಿಗೆ ತಂದಾಗ ನಗರ ಕೇಂದ್ರಿತ ಆರ್ಥಿಕತೆ, ದುಡಿಮೆ ಎಲ್ಲಾ ನೆಲಕಚ್ಚಿತು. ಆದರೆ, ಇಡೀ ದೇಶದ ಆರ್ಥಿಕತೆ ಪೂರ್ತಿ ನೆಲ ಕಚ್ಚದಂತೆ ಕಾಪಾಡಿದ್ದು ನಮ್ಮ ಗ್ರಾಮೀಣ ಆರ್ಥಿಕತೆ.
ಸಾಸಿವೆ ಡಬ್ಬಿ, ಎಲೆ ಅಡಿಕೆ ಚೀಲದಲ್ಲಿ ಗ್ರಾಮೀಣ ಮಹಿಳೆಯರು ಕಾಪಿಡುವ, ಉಳಿತಾಯ ಮಾಡುವ ಹಣ ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕುಟುಂಬಗಳ ಬದುಕಿಗೆ ಆಸರೆ ಆಗಿದ್ದನ್ನು ನಾವು ನೆನಪಿಸಿಕೊಳ್ಳಬೇಕು ಎಂದರು.

ಹೀಗಾಗಿ ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ.
ಪತ್ರಿಕೋದ್ಯಮವು ಮೇಲ್ಮಟ್ಟದ ಆರ್ಥಿಕ ಪ್ರಗತಿಗಿಂತ ಹೆಚ್ಚಾಗಿ, ಹಳ್ಳಿಗಳ ಜನರ ಆರೋಗ್ಯ, ಶಿಕ್ಷಣ ಮತ್ತು ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ಗಮನ ಹರಿಸಬೇಕಿದೆ ಎಂದರು.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ [KDP] ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮಿಸುತ್ತಾರೆ. ಇಂಥಾ ಪತ್ರಿಕೆಯಲ್ಲಿ, ಇಂಥಾ ದಿನ, ಇಂಥಾ ವರದಿ ಬಂದಿದೆ ಎಂದು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸಿರ್ತೀರಿ.
ಕಲುಷಿತ ನೀರು ಕುಡಿದು ಸಾವನ್ನಪ್ಪಿದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆರೋಗದ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ.

ಹಾಗೆಯೇ ಬರ ಮತ್ತು ಅತಿವೃಷ್ಟಿ ಸಂದರ್ಭದ ವರದಿಗಳು ವಿಧಾನಸೌಧದಲ್ಲಿ ತುರ್ತು ಸಭೆಗಳನ್ನು ನಡೆಸಲು, ತುರ್ತು ಪರಿಹಾರ ಒದಗಿಸಲು ವೇಗವರ್ದಕಗಳಾಗಿ ನೆರವಾಗಿವೆ ಎಂದರು.

ಹೀಗಾಗಿ ಪತ್ರಕರ್ತರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಳ್ಳಿಗಳಿಗೆ ಹೋಗಿ ಜನರ ಸಂಕಷ್ಟಗಳನ್ನು ಆಲಿಸುವುದು, ಸ್ಟುಡಿಯೋಗಳಲ್ಲಿ ಕುಳಿತು ಚರ್ಚೆ ಮಾಡುವುದಕ್ಕಿಂತ ಹೆಚ್ಚು ಉಪಯುಕ್ತವಾದುದು ಎನ್ನುವುದನ್ನು ಅರಿಯಬೇಕಿದೆ ಎಂದರು.

ಬರಗಾಲ ಮತ್ತು ಅತಿವೃಷ್ಟಿ ಹೆಸರಿನಲ್ಲಿ ಬರುವ ಅನುದಾನ ಹೇಗೆ ದುರುಪಯೋಗವಾಗುತ್ತದೆ ಎನ್ನುವುದನ್ನು ಗ್ರಾಮೀಣ ಪತ್ರಕರ್ತರು ಗಮನಿಸಿ ವರದಿ ಮಾಡಬೇಕು. ಇಂಥಾ ವರದಿಗಳನ್ನು ಮಾನ್ಯ ಮುಖ್ಯಮಂತ್ರಿಗಳು ಬಹಳ ಗಂಭೀರವಾಗಿ ತೆಗೆದುಕೊಳ್ಳುತ್ತಾರೆ.
ರೈತರು ಆತ್ಮಹತ್ಯೆ ಮಾಡಿಕೊಳ್ಳುವಾಗ, ಭಾರತದ ಕೃಷಿ ವಲಯವು ದೊಡ್ಡ ಬಿಕ್ಕಟ್ಟಿನಲ್ಲಿದ್ದಾಗ, ಗ್ರಾಮೀಣ ಪತ್ರಕರ್ತರು ಸೇನಾನಿಗಳಾಗಿ ನಿಂತು ವರದಿ ಮಾಡಬೇಕು ಎಂದರು.

ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರವೆಂದರೆ, ರೈತರ ಆತ್ಮಹತ್ಯೆಯ ಹಿಂದಿನ ನೈಜ ಸಾಲದ ಬಾಧೆಯನ್ನು ಹೊರಹಾಕುವುದು,
ಸರ್ಕಾರದ ನೀತಿಗಳು ಕೃಷಿಯ ಮೇಲೆ ಬೀರುತ್ತಿರುವ ದುಷ್ಪರಿಣಾಮಗಳನ್ನು ವಿಶ್ಲೇಶಿಸುವುದಾಗಿದೆ ಎಂದರು.

"ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿದ್ದರೆ, ಆ ಕನ್ನಡಿಯಲ್ಲಿ ಭಾರತದ 70% ಜನಸಂಖ್ಯೆ ಇರುವ ಹಳ್ಳಿಗಳು ಕಾಣಿಸಬೇಕು.
ಹೀಗಾಗಿ ಇಂಥಾ ವಿಶ್ಲೇಷಣೆಗಳು ಜನರ ಧ್ವನಿಯಾಗಿ ಗ್ರಾಮೀಣ ಭಾರತವನ್ನು ಬೆಳೆಸುಬೇಕು. ಜೊತೆಗೆ ಹಳ್ಳಿಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಅಲ್ಲಿನ ಜನರ ದೈನಂದಿನ ಹೋರಾಟಗಳಿಗೂ ಕನ್ನಡಿ ಹಿಡಿಯಬೇಕು. ಈ ಕನ್ನಡಿಯಲ್ಲಿ ವಿಧಾನಸೌಧದಲ್ಲಿ ಕುಳಿತಿರುವ ಅಧಿಕಾರಿಗಳು ಮುಖ ನೋಡಿಕೊಳ್ಳಬೇಕು ಎಂದರು.

ಸಭಾಪತಿ ಬಸವರಾಜ ಹೊರಟ್ಟಿ, ದತ್ತಿ ನಿಧಿ ಪ್ರಶಸ್ತಿ ಪುರಸ್ಕೃತ ತನುಜಾ ನಾಯಕ ಸೇರಿ ಜಿಲ್ಲಾ ಪತ್ರಕರ್ತರ ಸಂಘದ ಪದಾಧಿಕಾರಿಗಳು ಮತ್ತು ವಿವಿಯ ಕುಲಸಚಿವರಾದ ಸುರೇಶ್ ನಾಡಗೌಡ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.